ಸಂಪುಟ : 9 ಸಂಚಿಕೆ 290 ಪುಟ : 4+2 ಬೆಲೆ: 3.00 ರವಿವಾರ ಡಿಸೆಂಬರ್ 29 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 290 Pages : 4+2 Price : 3.00 Sunday December 29 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ರೈತರಿಂದ ಖರೀದಿಸಿದ್ದ ಕಡಲೆಗೆ 12 ತಿಂಗಳಾದರೂ ಬಾಕಿ ಹಣ ಪಾವತಿಯಿಲ್ಲ

# ಹಣ ಕೊಡಿಸದಿದ್ದರೆ ಅನಿರ್ದಿಷ್ಟಾವಧಿ ಧರಣಿ

■ ವಿಜಯಸಾಕ್ಷಿ ಸುದ್ದಿ, ಗದಗ

'ಕೃಷಿ ಸಖಿ' ಅಡಿಯಲ್ಲಿ ಕಾರ್ಯ ನಿರ್ವಹಿಸುವ ಮಹಿಳಾ ಸ್ವ-ಸಹಾಯ ಸಂಘಗಳ ಮೂಲಕ ಜಿಲ್ಲೆಯ ಗದಗ ಮತ್ತು ಮುಂಡರಗಿ ತಾಲೂಕಿನ 450 ರೈತರಿಂದ ಖರೀದಿಸಿದ್ದ ಕಡಲೆಗೆ 12 ತಿಂಗಳಾದರೂ ಬಾಕಿ ಹಣ ಪಾವತಿಸಿಲ್ಲ. 2025ರ ಜನವರಿ 5ರೊಳಗಾಗಿ ಜಿಲ್ಲಾಡಳಿತ ಮಧ್ಯ ಪ್ರವೇಶಿಸಿ ಹಣ ಕೊಡಿಸಬೇಕು. ಇಲ್ಲದಿದ್ದರೆ ಜನವರಿ 6ರಿಂದ ಸೂಕ್ತ ನ್ಯಾಯ ಕೋರಿ ಜಿಲ್ಲಾಡಳಿತ ಭವನದ ಎದುರು ಅಹೋರಾತ್ರಿ ಧರಣಿ ಹಮ್ಮಿಕೊಳ್ಳುವುದಾಗಿ ಅಖಿಲ ಕರ್ನಾಟಕ ಭ್ರಷ್ಟಾಚಾರ ನಿರ್ಮೂಲನಾ ರೈತ ಸಂಘ ಹಾಗೂ ಹಸಿರು ಸೇನೆಯ ರಾಜ್ಯಾಧ್ಯಕ್ಷ ಡಿ.ಎಚ್. ನವಲಗುಂದ ಹಾಗೂ ಮಹಿಳಾ ಘಟಕದ ರಾಜ್ಯಾಧ್ಯಕ್ಷೆ ಮಹಾದೇವಿ ಹುಯಿಲಗೋಳ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಶನಿವಾರ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಗದಗ ಜಿಲ್ಲಾ ಪಂಚಾಯಿತಿ ಮತ್ತು ತಾಲೂಕು ಪಂಚಾಯಿತಿಯಿಂದ 'ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಸಂವರ್ಧನ ಸಂಸ್ಥೆ (ಎನ್ಆರ್ಎಂಎಲ್)



ಗದಗ ಒಕ್ಕೂಟದಡಿ 'ಕೃಷಿ ಸಖಿ'ಗಳನ್ನು ನೇಮಿಸಿದೆ. ಇದರಡಿ ಬರುವ ಮಹಿಳಾ ಸ್ವಸಹಾಯ ಸಂಘಗಳ ಮೂಲಕ ಎನ್ಆರ್ಎಂಎಲ್ ಜಿ.ಪಂ ಕಾರ್ಯಕ್ರಮ ವ್ಯವಸ್ಥಾಪಕ ಚಂದ್ರಶೇಖರ ಎಲಿಗಾರ, ತಾ.ಪಂ ಕಾರ್ಯಕ್ರಮ ವ್ಯವಸ್ಥಾಪಕ ಆನಂದ ಬೆಳವಣಿಕಿ ಹಾಗೂ ತಾಲೂಕಾ ತಾಂತ್ರಿಕ ಸಂಯೋಜಕ ಜಗದೀಶ ಕಂಬಾಳಿಮಠ ಎಂಬುವವರು ದಾವಣಗೆರೆಯ ಮಾರುತಿ ಗೌಡ ಎಂಬುವವರೊಂದಿಗೆ ಮಧ್ಯಸ್ಥಿಕೆ ವಹಿಸಿ ಮೂರು ತಿಂಗಳಲ್ಲಿ ಅಂದಾಜು 27 ಕೋಟಿ ರೂ. ಮೌಲ್ಯದ ಕಡಲೆಯನ್ನು ಹಲವು ಗ್ರಾಮಗಳಲ್ಲಿ ಖರೀದಿಗೆ ಕೊಡಿಸಿದ್ದಾರೆ.

ಈ ಪೈಕಿ 20 ಕೋಟಿ ರೂ. ಹಣವನ್ನು ಆರ್‌ಟಿಜಿಎಸ್ ಮೂಲಕ ಪಾವತಿಸಿದ್ದು, ಬಾಕಿ ಉಳಿದ 6.50 ಕೋಟಿ ರೂ. ಹಣವನ್ನು ಪಾವತಿಸುತ್ತಿಲ್ಲ. ಸಂಬಂಧಿಸಿದ ಅಧಿಕಾರಿಗಳಿಗೆ ಈ ಬಗ್ಗೆ ಕೇಳಿದರೆ ಸೂಕ್ತ ಸ್ಪಂದನೆ ನೀಡುತ್ತಿಲ್ಲ. ಕೆಲವರು 2023ರ ಆಗಸ್ಟ್ ತಿಂಗಳಲ್ಲಿ ಇದು ಅಂತ್ಯಗೊಂಡಿದೆ ಎನ್ನುತ್ತಾರೆ. ಆದರೆ, 2024ರ ಜನವರಿಯಲ್ಲಿ ಇವರು ಕಡಲೆ ಖರೀದಿಸಿದ್ದು ಹೇಗೆ ಎಂದು ಪ್ರಶ್ನಿಸಿದರು.

ಸುದ್ದಿಗೋಷ್ಠಿಯಲ್ಲಿ ನಾರಾಯಣ ಬಿರಸಲ, ಎಸ್.ಬಿ. ಮುಲ್ಲಾ, ಸೋಮನಾಥ ಎಸ್.ಲಮಾಣಿ, ಲಕ್ಷ್ಮೀ ಹಿತ್ತಲಮನಿ, ಸರಸ್ವತಿ ದಾಸರ, ಸರಸ್ವತಿ ಬೆಟಗೇರಿ, ಶಿವಪ್ಪ ಮೂಲಿಮನಿ, ವೆಂಕಣ್ಣ ಮಲ್ಲರೆಡ್ಡಿ, ಸೋಮರಡ್ಡಿ ಹೊಸಮನಿ, ಪಂಚಾಕ್ಷರಯ್ಯ ಬೆಟಗೇರಿಮಠ, ಸಿದ್ದಪ್ಪ ಮುಳ್ಳೂರ, ಬಸವರಾಜ ಬಾಳಿಕಾಯಿ, ಮಂಜುನಾಥ ಗೋಡಿ, ವಾಯ್.ಎನ್. ಕೆಂಚನಗೌಡ್ರ, ಆನಂದ ಸಗರ ಮುಂತಾದವರು ಉಪಸ್ಥಿತರಿದ್ದರು.

ಜಿಲ್ಲಾ ಕಾರ್ಯಕ್ರಮ ವ್ಯವಸ್ಥಾಪಕರ ಸೂಚನೆಯಂತೆ ಖರೀದಿ ನಡೆದಿದೆ. ಕಡಲೆ ಖರೀದಿಸಿದ ವ್ಯಕ್ತಿ 12 ತಿಂಗಳಾದರೂ ಈ ಹಣ ನೀಡುತ್ತಿಲ್ಲ. ಕಡಲೆ ಖರೀದಿ ವೇಳೆ ಎನ್ಆರ್ಎಂಎಲ್ ಮನವಿ ಮೇರೆಗೆ ರೈತರನ್ನು ಪರಿಚಯಿಸಲು ಮಧ್ಯಸ್ಥಿಕೆ ವಹಿಸಿದ್ದ ಸ್ಥಳೀಯ ಮಹಿಳಾ ಸಂಘದ ಸದಸ್ಯರು ಒತ್ತಡಕ್ಕೆ ಸಿಲುಕುವಂತಾಗಿದೆ. ಈ ಬಗ್ಗೆ ಅಧಿಕಾರಿಗಳು, ಜನಪ್ರತಿನಿಧಿಗಳಿಗೆ ಮನವಿ ಸಲ್ಲಿಸಲಾಗಿದೆ. ಆದರೆ ಯಾವುದೇ ಪರಿಹಾರ ಸಿಕ್ಕಿಲ್ಲ. ಆದ್ದರಿಂದ, ಅನಿವಾರ್ಯವಾಗಿ ಧರಣಿ ನಡೆಸಲು ನಿರ್ಧರಿಸಿದ್ದೇವೆಂದು ಡಿ.ಎಚ್. ನವಲಗುಂದ ತಿಳಿಸಿದರು.

---

## ಬಸವದಳದಲ್ಲಿ ದತ್ತಿ ಉಪನ್ಯಾಸ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಶಿವಾನಂದ ನಗರದ ಬಸವ ಸಮುದಾಯ ಭವನದಲ್ಲಿ ಡಿ. 29ರ ಬೆಳಿಗ್ಗೆ 11ಕ್ಕೆ ನಡೆಯಲಿರುವ ಬಸವದಳದ 1626ನೇ ಶರಣ ಸಂಗಮದಲ್ಲಿ ತಾಲೂಕಾ ಶರಣ ಸಾಹಿತ್ಯ ಪರಿಷತ್ತು ಗದಗ, ತಾಲೂಕಾ ಕದಳಿ ಮಹಿಳಾ ವೇದಿಕೆ ಗದಗ ಹಾಗೂ ಬಸವದಳ, ಗದಗ-ಬೆಟಗೇರಿ ಇವುಗಳ ಸಂಯುಕ್ತಾಶ್ರಯದಲ್ಲಿ ಶ್ರೀ ಕೂರಾ ಪಾಂಡುರಂಗ ಕೂರಾ ಈಶ್ವರಪ್ಪ ಶೆಟ್ಟಿ ಇವರ ದತ್ತಿ ಉಪನ್ಯಾಸ (ದತ್ತಿ ದಾನಿಗಳು: ಪ್ರೊ. ಎಂ. ಬಸವರಾಜ ಮಟಮಾರಿ) ಹಾಗೂ ವಚನ ಚಿಂತನೆ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಅಧ್ಯಕ್ಷತೆಯನ್ನು ಬಸವದಳದ ಅಧ್ಯಕ್ಷ ವಿ.ಕೆ. ಕರೇಗೌಡ್ರ ವಹಿಸುವರು. ಶರಣ ತತ್ವ ಚಿಂತಕರಾದ ಗಿರಿಜಕ್ಕ ಧರ್ಮರಡ್ಡಿ ಉಪನ್ಯಾಸ ಮಾಡುವರು. ಎನ್. ಎಚ್. ಹಿರೇಸಕ್ಕರಗೌಡ್ರ ಇವರು ಶರಣೆ ಸತ್ಯಕ್ಕನವರ ವಚನಗಳ ಚಿಂತನೆ ಮಾಡುವರು. ಅತಿಥಿಗಳಾಗಿ ಕೂರಾ ಅರವಿಂದ ವ್ಯಾಪಾರಸ್ಥರು, ಗದಗ ಇವರು ಆಗಮಿಸುವರು.

ಬಸವದಳದ ಹಾಗೂ ಗದಗ ತಾಲೂಕಾ ಶರಣ ಸಾಹಿತ್ಯ ಪರಿಷತ್ತು, ಗದಗ ತಾಲೂಕಾ ಕದಳಿ ಮಹಿಳಾ ವೇದಿಕೆಯ ಸದಸ್ಯರು, ಶರಣ ಸಾಹಿತ್ಯಾಭಿಮಾನಿಗಳು ಹಾಗೂ ಆಸಕ್ತರು ಭಾಗವಹಿಸಬೇಕೆಂದು ಸಂಘಟಕರ ಪರವಾಗಿ ಪ್ರಕಾಶ ಅಸುಂಡಿಯವರು ವಿನಂತಿಸಿದ್ದಾರೆ.

---

## ಸಚಿನ್ ಆತ್ಮಹತ್ಯೆ ಕೇಸ್: ಪ್ರಿಯಾಂಕ್ ಖರ್ಗೆ ಆಪ್ತ ಸೇರಿ 6 ಮಂದಿ ವಿರುದ್ಧ ಕೇಸ್

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಸಚಿವ ಪ್ರಿಯಾಂಕ್ ಖರ್ಗೆ ಆಪ್ತನಿಂದ ಕೊಲೆ ಬೆದರಿಕೆ ಆರೋಪ ಕೇಳಿಬಂದಿದ್ದು, ಬೀದರ್ ನಲ್ಲಿ ಚಲಿಸುತ್ತಿದ್ದ ರೈಲಿಗೆ ತಲೆ ಕೊಟ್ಟು ಗುತ್ತಿಗೆದಾರ ಸಚಿನ್ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಸದ್ಯ ಈ ಘಟನೆ ರಾಜಕೀಯವಾಗಿ ತಿರುವು ಪಡೆದುಕೊಳ್ಳುತ್ತಿದೆ. ಇದೀಗ ಬಿಜೆಪಿ ನಾಯಕರು ನೀಡಿದ ದೂರಿನ ಅನ್ವಯ ಪ್ರಿಯಾಂಕ್ ಖರ್ಗೆ ಆಪ್ತ ರಾಜು ಕಪನೂರ್ ಮತ್ತು ಗ್ಯಾಂಗ್ ವಿರುದ್ಧ ಎಫ್ಐಆರ್ ದಾಖಲಾಗಿದೆ.

ಬಿಜೆಪಿ ನಾಯಕರ ಒತ್ತಡಕ್ಕೆ ಕೊನೆಗೂ ಮಣಿದಿರುವ ಕಲಬುರಗಿ ಸ್ಟೇಷನ್ ಬಜಾರ್ ಠಾಣೆಯ ಪೊಲೀಸರು ಎಫ್ಐಆರ್ ದಾಖಲಿಸಿಕೊಂಡಿದ್ದಾರೆ. ತಮ್ಮ ವಿರುದ್ಧ ಕೊಲೆ ಸಂಚು ಹೂಡಲಾಗಿದೆ ಎಂದು ಬಿಜೆಪಿ ನಾಯಕರು ದೂರು ನೀಡಿದ್ದರು. ಬಿಜೆಪಿ ನಾಯಕರು ನೀಡಿದ್ದ ದೂರನ್ನು ಪೊಲೀಸರು ಸ್ವೀಕರಿಸುತ್ತಿಲ್ಲ ಎಂದು ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಶನಿವಾರ ಬೆಳಗ್ಗೆ ಪ್ರತಿಭಟನೆ ನಡೆಸಿದ್ದರು.

ಪೊಲೀಸರ ಹಾಗೂ ಬಿಜೆಪಿ ನಾಯಕರ ಮಧ್ಯೆ ವಾಕ್ಸಮರ ನಡೆದು, ಸ್ಟೇಷನ್ ಬಜಾರ್ ಠಾಣೆ ಎದುರು ಹೈಡ್ರಾಮವೇ ನಡೆದಿತ್ತು. ಇದೀಗ ರಾಜು ನಂದಕುಮಾರ್, ನಾಗಭುಜಂಗೆ ಸೇರಿದಂತೆ ಆರು ಜನರ ವಿರುದ್ಧ ಬಿಎನ್ಎಸ್ ಸೆಕ್ಷನ್ 351 (2) ಅಡಿಯಲ್ಲಿ ಎಫ್ಐಆರ್ ದಾಖಲಿಸಲಾಗಿದೆ. ಕೋರ್ಟ್ ಗಮನಕ್ಕೆ ತಂದ ಬಳಿಕವೇ ಪೊಲೀಸರು ಈ ಕ್ರಮ ಕೈಗೊಂಡಿದ್ದಾರೆ.

---

## ಸಾರಿಗೆ ಕಾರ್ಮಿಕ ಸಂಘಟನೆಗಳ ಜಂಟಿ ಕ್ರಿಯಾ ಸಮಿತಿಯಿಂದ 31ರಿಂದ ಅನಿರ್ದಿಷ್ಟಾವಧಿ ಧರಣಿ

# ಅನಾನುಕೂಲಗಳಿಗೆ ಸರ್ಕಾರವೇ ಹೊಣೆ

■ ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯ ರಸ್ತೆ ಸಾರಿಗೆ ನಿಗಮಗಳ ಕಾರ್ಮಿಕ ಸಂಘಟನೆಗಳ ಜಂಟಿ ಕ್ರಿಯಾ ಸಮಿತಿ ವತಿಯಿಂದ ಸಾರಿಗೆ ಸಂಸ್ಥೆಯ ನೌಕರರ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ಡಿ. 31ರಿಂದ ಅನಿರ್ದಿಷ್ಟಾವ ಧರಣಿ ಸತ್ಯಾಗ್ರಹ ಹಮ್ಮಿಕೊಳ್ಳಲಾಗಿದೆ ಎಂದು ಕ್ರಿಯಾ ಸಮಿತಿಯ ಎಸ್.ಎ. ಮುಳವಾಡ ತಿಳಿಸಿದರು.

ಶನಿವಾರ ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಾರಿಗೆ ಸಂಸ್ಥೆ ನೌಕರರು ತಮ್ಮ ಕೆಲಸವನ್ನು ಸ್ಥಗಿತಗೊಳಿಸಿ, ಶಾಂತಿಯುತ ಮುಷ್ಕರದಲ್ಲಿ ಪಾಲ್ಗೊಳ್ಳಲಿದ್ದಾರೆ. ಮುಷ್ಕರದ ಸಂದರ್ಭದಲ್ಲಿ ಪ್ರಯಾಣಿಕರಿಗೆ ಉಂಟಾಗುವ ತೊಂದರೆಗಳಿಗೆ ರಾಜ್ಯ ಸರಕಾರವೇ ಕಾರಣವಾಗುತ್ತದೆ ಎಂದು ತಿಳಿಸಿದರು.




ಸಾರಿಗೆ ಸಂಸ್ಥೆ ನೌಕರರಿಗೆ 38 ತಿಂಗಳ ವೇತನ ಹಿಂಬಾಕಿ (ಅರಿಯರ್ಸ್) ಪಾವತಿಸಿಲ್ಲ. 2024 ಜನವರಿ 1ರಿಂದ ಸಂಸ್ಥೆಯ ನಿಯಮಾವಳಿಯನ್ವಯ ವೇತನ ಪರಿಷ್ಕರಣೆ ಆಗಿಲ್ಲ. ಸಾರಿಗೆ ಘಟಕಗಳಲ್ಲಿ ಚಾಲಕ, ನಿರ್ವಾಹಕ ಮತ್ತು ತಾಂತ್ರಿಕ ಸಿಬ್ಬಂದಿಗಳ ಮೇಲೆ ತೀವ್ರ ಕಿರುಕುಳ ಉಂಟಾಗುತ್ತಿರುವ ಬಗ್ಗೆ ಯಾವುದೇ ಪರಿಹಾರ ಸೂತ್ರ ರಚನೆ ಸೇರಿದಂತೆ ಇನ್ನಿತರ ಬೇಡಿಕೆಗಳನ್ನು ಈಡೇರಿಸುವಂತೆ ಸರಕಾರಕ್ಕೆ ಒತ್ತಾಯಿಸುತ್ತ ಬಂದಿದ್ದೇವೆ. ಆದರೂ ಸರಕಾರ ನಮ್ಮ ಬೇಡಿಕೆಗೆ ಸ್ಪಂದಿಸಿಲ್ಲ. ಈ ಹಿನ್ನೆಲೆಯಲ್ಲಿ ಅನಿರ್ದಿಷ್ಟಾವ ಧರಣಿ ನಡೆಸಲು ನಿರ್ಧರಿಸಲಾಗಿದೆ ಎಂದು ತಿಳಿಸಿದರು.

ಸರಕಾರದಿಂದ ಈವರೆಗೆ ಸಂಸ್ಥೆಗೆ 5492 ಕೋಟಿ ರೂ. ಪಾವತಿಯಾಗಬೇಕಿದೆ. ಗ್ಯಾರಂಟಿ ಯೋಜನೆಯಲ್ಲಿ ಒಂದಾಗಿರುವ ಶಕ್ತಿ ಯೋಜನೆಯನ್ನು ಯಶಸ್ವಿಯಾಗಿ ಜಾರಿಗೊಳಿಸುತ್ತಿರುವ ಸಾರಿಗೆ ಸಂಸ್ಥೆಯ ಸಿಬ್ಬಂದಿಗಳಿಗೆ ಹೆಚ್ಚುವರಿ ಕರ್ತವ್ಯದ ಹೊರೆ ಬೀಳುತ್ತಿದೆ. ಇದರಿಂದ ಸಹಜವಾಗಿ ಅನೇಕ ರೋಗಗಳಿಗೆ ತುತ್ತಾಗುತ್ತಿದ್ದಾರೆ. ಈ ಹಿಂದಿನ ಸರಕಾರ ಮಾತ್ರವಲ್ಲದೇ ಈಗಿನ ಸರಕಾರವೂ ಸಾರಿಗೆ ಸಂಸ್ಥೆ ಸಮಸ್ಯೆಗಳಿಗೆ ಸ್ಪಂದಿಸಿಲ್ಲ. ಹೀಗಾಗಿ ಅನಿವಾರ್ಯವಾಗಿ ಮುಷ್ಕರ ಕೈಗೊಳ್ಳುವ ನಿರ್ಧಾರ ಕೈಗೊಂಡಿದ್ದೇವೆ ಎಂದು ಎಸ್.ಎ. ಮುಳವಾಡ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಗೋಪಾಲ ರಾಯರ, ಬಿ.ಎಚ್. ರಾಮೇನಹಳ್ಳಿ, ಎಸ್.ಕೆ. ಅಯ್ಯನಗೌಡರ, ಎಂ. ಆಂಜನೇಯ, ಎಸ್. ಎಫ್ . ಸಂಗಣ್ಣವರ, ಎಚ್.ಸಿ. ಕೊಪ್ಪಳ, ಬಿ. ನಾಗರಾಜ ಮುಂತಾದವರು ಉಪಸ್ಥಿತರಿದ್ದರು.

---

# ಮಕ್ಕಳ ಪ್ರತಿಭೆಗಳನ್ನು ಗುರುತಿಸಿ



■ ವಿಜಯಸಾಕ್ಷಿ ಸುದ್ದಿ, ಗದಗ

ಪ್ರತಿಯೊಬ್ಬರಲ್ಲಿಯೂ ಒಂದಲ್ಲ ಒಂದು ಪ್ರತಿಭೆ ಇದ್ದೇ ಇರುತ್ತದೆ. ಅದನ್ನು ಅನಾವರಣಗೊಳಿಸಲು ಸೂಕ್ತ ಪ್ರೋತ್ಸಾಹ ಅಗತ್ಯವಾಗಿದೆ ಎಂದು ಕರ್ನಾಟಕ ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್ತಿನ ಗದಗ ಜಿಲ್ಲಾಧ್ಯಕ್ಷ ವಿಜಯಕುಮಾರ ಬಣಕಾರ ಹೇಳಿದರು.

ಅವರು ನಗರದ ಗಂಗಾಪೂರ ಪೇಟೆಯಲ್ಲಿರುವ ಶ್ರೀ ದುರ್ಗಾದೇವಿ ಶಿಕ್ಷಣ ಸಮಿತಿಯ 2024-25ನೇ ಸಾಲಿನ ಕ್ರೀಡಾಕೂಟವನ್ನು ಉದ್ಘಾಟಿಸಿ ಮಾತನಾಡುತ್ತಿದ್ದರು.

ಮಕ್ಕಳನ್ನು ಮಾರ್ಕ್ಸ್ ತೆಗೆಯುವ ಯಂತ್ರವನ್ನಾಗಿಸದೇ ಅವರಲ್ಲಿರುವ ಪ್ರತಿಭೆಯನ್ನು ಗುರುತಿಸುವ ಕೆಲಸವಾಗಬೇಕು. ಶಿಕ್ಷಣ ಬುದ್ಧಿಗೆ ಸಾಧನವಾದರೆ, ಕ್ರೀಡಾ ಚಟುವಟಿಕೆಗಳು ದೇಹವನ್ನು ಸದೃಢಗೊಳಿಸುತ್ತವೆ. ಅದ್ದರಿಂದ ಪಠ್ಯದೊಂದಿಗೆ ಪಠ್ಯೇತರ ಚಟುವಟಿಕೆಗಳಲ್ಲಿ ಮಕ್ಕಳು ಪಾಲ್ಗೊಳ್ಳುವಂತೆ ಪಾಲಕರು ಪ್ರೋತ್ಸಾಹಿಸಬೇಕು ಎಂದು ಹೇಳಿದರು.

ವಿಕಲಚೇತನರ ಕ್ಷೇತ್ರದಲ್ಲಿ ಸಾಧನೆ ಮಾಡಿದ ವಿಜಯಕುಮಾರ ಬಣಕಾರ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ವತಿಯಿಂದ ರಾಜ್ಯಮಟ್ಟದ ಪ್ರಶಸ್ತಿ ಪಡೆದ ಹಿನ್ನೆಲೆಯಲ್ಲಿ ಅವರನ್ನು ಶಿಕ್ಷಣ ಸಮಿತಿಯಿಂದ ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಶ್ರೀ ದುರ್ಗಾದೇವಿ ಶಿಕ್ಷಣ ಸಮಿತಿಯ ನಿರ್ದೇಶಕಿ ಕವಿತಾ ಇಮರಾಪೂರ, ಸಲಹಾ ಸಮಿತಿಯ ಸದಸ್ಯರಾದ ಮುತ್ತು ಜಡಿ, ಮುಖ್ಯೋಪಾಧ್ಯಾಯೆ ಎಚ್.ಎಂ. ನದಾಫ್, ಮಂಜುಳಾ ಹಿಡ್ಕಿಮಠ, ರೇಖಾ ಅಂಗಡಿ, ಸುಧಾ ತಿರಕಣ್ಣವರ, ವಂದನಾ ಕಲ್ಮನಿ, ಮಂಜುಳಾ ದಾಸರ, ರೂಪಾ ಟೆಂಗಿನಕಾಯಿ, ಸಿಬ್ಬಂದಿಗಳಾದ ಲಕ್ಷ್ಮೀ ಕಮಡೊಳ್ಳಿ, ಸೈನಾಜಬಾನು ರೋಣ ಮುಂತಾದವರು ಉಪಸ್ಥಿತರಿದ್ದರು.

---

## ಕರ್ನಾಟಕ ರಕ್ಷಣಾ ವೇದಿಕೆಯ ಬೆಳ್ಳಿ ಮಹೋತ್ಸವ : ಮಂಜುನಾಥ ಪರ್ವತಗೌಡ್ರ ಮಾಹಿತಿ

# ನಾರಾಯಣರಾವ್ ವೃತ್ತದಲ್ಲಿ ಕುವೆಂಪು ಜನ್ಮದಿನಾಚರಣೆ

■ ವಿಜಯಸಾಕ್ಷಿ ಸುದ್ದಿ, ಗದಗ

ರಾಷ್ಟ್ರಕವಿ ಕುವೆಂಪು ಅವರ ಜನ್ಮ ದಿನಾಚರಣೆ ಸೇರಿದಂತೆ ಕರ್ನಾಟಕ ರಕ್ಷಣಾ ವೇದಿಕೆ (ಹೆಚ್. ಶಿವರಾಮೇಗೌಡ) ಬಣದ 25ನೇ ಬೆಳ್ಳಿ ಮಹೋತ್ಸವ ಆಚರಿಸಲು ಗದಗ ಜಿಲ್ಲಾ ಹೆಚ್. ಶಿವರಾಮೇಗೌಡ ಬಣದ ಜಿಲ್ಲಾಧ್ಯಕ್ಷ ಮಂಜುನಾಥ ಪರ್ವತಗೌಡ್ರ ಹೇಳಿದರು.



ನಗರದ ಪ್ರವಾಸಿ ಮಂದಿರದಲ್ಲಿ ನಡೆದ ಜಿಲ್ಲಾ ಸಭೆಯಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ 25 ವರ್ಷದ ಹಿಂದೆ ಕರ್ನಾಟಕ ರಕ್ಷಣಾ ವೇದಿಕೆ ಸ್ಥಾಪಿಸಿದ್ದು ಇತಿಹಾಸ. ಅದರಂಗವಾಗಿ ಬೆಂಗಳೂರಿನಲ್ಲಿ ಫೆಬ್ರುವರಿ 1ನೇ ತಾರೀಖಿನಂದು ಸಮಾವೇಶ ಜರುಗಲಿದೆ. ಈ ಕಾರ್ಯಕ್ರಮದಲ್ಲಿ ಎಲ್ಲ ಕಾರ್ಯಕರ್ತರು ಭಾಗವಹಿಸಿ ಯಶಸ್ವಿಗೊಳಿಸಲು ಶ್ರಮಿಸಬೇಕೆಂದು ಹೇಳಿದರು.

ಉತ್ತರ ಕರ್ನಾಟಕ ರಾಜ್ಯ ಸಂಚಾಲಕ ಬಸವರಾಜ ದೇಸಾಯಿ ಮಾತನಾಡಿ, ಕನ್ನಡದ ನೆಲ, ಜಲ, ಭಾಷೆಗೆ ಅನ್ಯಾಯ ಆದರೆ ನಮ್ಮ ಸಂಘಟನೆ ಸಹಿಸುವುದಿಲ್ಲ ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಗೌರವಾಧ್ಯಕ್ಷ ಗುರುರಾಜ ಕಲಕೇರಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಬಸವರಾಜ ಮುಳ್ಳಾಳ, ಗದಗ ಜಿಲ್ಲಾ ಸಂಚಾಲಕರಾದ ಪರಶುರಾಮ ಬನ್ನೂರ, ವಾದಿರಾಜ ಕೌಜಲಗಿ, ರಾಯೇಸಾಬ ಒಂಟಿ, ದಾವಲ್ ಎಂ.ಮುಳಗುಂದ, ಸುರೇಶ ರಾಮೇನಹಳ್ಳಿ, ಸುರೇಶ ಮುಳಗುಂದ, ಮಂಜುನಾಥ ಹನಮಂತಗೌಡ್ರ, ಹುಚ್ಚುಸಾಬ ನದಾಫ್, ಸಂಜೀವ ಬೆನಹಾಳ, ಉದಯ ದಳವಾಯಿ ಮುಂತಾದವರು ಉಪಸ್ಥಿತರಿದ್ದರು.

ಡಿ. 29ರ ಬೆಳಿಗ್ಗೆ 10.30 ಗಂಟೆಗೆ ಕರ್ನಾಟಕದ ಏಕೀಕರಣ ರೂವಾರಿ, ಹೆಮ್ಮೆಯ ಗದುಗಿನ ಕವಿ ಹುಯಿಲಗೋಳ ನಾರಾಯಣರಾಯರ ವೃತ್ತದಲ್ಲಿ ವಿಶ್ವಮಾನವ, ಕನ್ನಡಿಗರ ಹೆಮ್ಮೆಯ ಕವಿ ಕುವೆಂಪು ಅವರ ಜನ್ಮ ದಿನೋತ್ಸವವನ್ನು ಕರ್ನಾಟಕ ರಕ್ಷಣಾ ವೇದಿಕೆ (ಹೆಚ್. ಶಿವರಾಮೇಗೌಡ ಬಣ) ಗದಗ ಜಿಲ್ಲಾ ಘಟಕದಿಂದ ಆಚರಿಸಲಾಗುತ್ತಿದ್ದು, ಕಾರಣ ಕರವೇ ಕುಟುಂಬದ ಎಲ್ಲ ಘಟಕಗಳ ಪದಾಧಿಕಾರಿಗಳು, ಕಾರ್ಯಕರ್ತರು, ಅಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಗದಗ ಜಿಲ್ಲಾ ಅಧ್ಯಕ್ಷರಾದ ಮಂಜುನಾಥ ಪಿ. ಪರ್ವತಗೌಡ್ರ ವಿನಂತಿಸಿದ್ದಾರೆ.

## ಹೊಸವರ್ಷ ಆಚರಣೆಗೆ ಬೆಂಗಳೂರಲ್ಲಿ ಟಫ್ ರೂಲ್ಸ್ ಜಾರಿ!

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಹೊಸ ವರ್ಷಾಚರಣೆಗೆ ಇನ್ನೇನು ಕೆಲವೇ ದಿನಗಳು ಬಾಕಿ ಉಳಿದಿದೆ. ಬಹುತೇಕ ಜನ 2025 ನ್ನು ಬರ ಮಾಡಿಕೊಳ್ಳಲು ಭರ್ಜರಿ ತಯಾರಿ ಮಾಡಿಕೊಳ್ಳುತ್ತಿದ್ದಾರೆ. ಅದರಲ್ಲೂ ವಿಶೇಷವಾಗಿ ಸಿಲಿಕಾನ್ ಸಿಟಿ ಬೆಂಗಳೂರಿನ ಮಂದಿ ವಿಶೇಷ ಸಂಭ್ರಮಾಚರಣೆ ಮಾಡುವುದನ್ನು ಪ್ರತೀ ವರ್ಷವೂ ನಾವು ಕಾಣುತ್ತೇವೆ. ಮಧ್ಯರಾತ್ರಿ ಕಳೆದರೂ ಹೊಸ ವರ್ಷದ ಸಂಭ್ರಮ ಮುಗಿದಿರುವುದಿಲ್ಲ.

ಈ ಹಿನ್ನೆಲೆಯಲ್ಲಿ ಕಮಿಷನರ್ ಕಚೇರಿಯಲ್ಲಿ ಬೆಂಗಳೂರು ನಗರ ಪೊಲೀಸ್ ಆಯುಕ್ತ ಬಿ. ದಯಾನಂದ್ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ್ದಾರೆ.

ರೆಸ್ಟೋರೆಂಟ್, ಹೋಟೆಲ್ ಮತ್ತು ಪಬ್ ಗಳನ್ನು ಹೊಸ ವರ್ಷಾಚರಣೆ ದಿನ (ಡಿಸೆಂಬರ್.31) ರಂದು ರಾತ್ರಿ 1 ಗಂಟೆಯ ಒಳಗಾಗಿ ಬಂದ್ ಮಾಡಬೇಕೆಂದು ಸೂಚನೆ ನೀಡಲಾಗಿದೆ. ಅಂದು, ನಶೆಯಲ್ಲಿ ಮೇಲ್ಸೇತುವೆಗಳ ಮೇಲೆ ರಂಪಾಟ ಮಾಡುವ, ಅಹಿತಕರ ಘಟನೆಗಳು ನಡೆಯುವ ಸಾಧ್ಯತೆ ಇರುತ್ತದೆ. ಹೀಗಾಗಿ, ವಿಮಾನ ನಿಲ್ದಾಣಕ್ಕೆ ಸಂಪರ್ಕಿಸುವ ಮೇಲ್ಸೇತುವೆ ಸೇರಿದಂತೆ ನಗರದ ಎಲ್ಲ ಮೇಲ್ಸೇತುವೆಗಳನ್ನು ಬಂದ್ ಮಾಡಲಾಗುತ್ತದೆ ಎಂದರು.

ಬೆಂಗಳೂರು ಹೊರ ವಲಯದಲ್ಲಿ ನಡೆಯುವ ರೇವ್ ಪಾರ್ಟಿ ಸೇರಿದಂತೆ ಎಲ್ಲ ಪಾರ್ಟಿಗಳ ಮೇಲೆ ಕಣ್ಣಿಡಲಾಗಿದೆ. ಇನ್ನು, ನಗರದಲ್ಲಿ ಎಂಜಿ ರೋಡ್, ಬ್ರಿಗೇಡ್ ರೋಡ್, ಕೋರಮಂಗಲ್, ಇಂದಿರಾನಗರ ಸೇರಿ ಎಲ್ಲಿ ಹೆಚ್ಚು ಜನರು ಸೇರುತ್ತಾರೆ ಅಲ್ಲಿ ಸೇಫ್ಟಿ ಐಲ್ಯಾಂಡ್, ಸಿಸಿಟಿವಿ, ಡ್ರೋಣ್ ಕ್ಯಾಮೆರಾಗಳನ್ನು ಅಳವಡಿಸಲಾಗಿದೆ. ಅಲ್ಲದೇ, ಶ್ವಾನದಳದಿಂದ ತಪಾಸಣೆ ಮಾಡಲಾಗುತ್ತೆ. ಹೆಚ್ಚಿನ ಲೈಟಿಂಗ್ ವ್ಯವಸ್ಥೆ, ಬ್ಯಾರಿಕೇ ಡ್ ವ್ಯವಸ್ಥೆ, ಅಗ್ನಿಶಾಮಕ ದಳ ವಾಹನ ಇರುತ್ತದೆ ಎಂದು ತಿಳಿಸಿದರು.

ಬ್ರಿಗೇಡ್, ಎಂಜಿ ರೋಡ್ ನಲ್ಲಿ ಏಕಮುಖ ಸಂಚಾರವಿರುತ್ತದೆ. ಡಿಸೆಂಬರ್ 31ರಂದು ರಾತ್ರಿ 11 ಗಂಟೆಯಿಂದ ಎಂಜಿ ರಸ್ತೆ ಮೆಟ್ರೊ ನಿಲ್ದಾಣದ ಪ್ರವೇಶ ದ್ವಾರಗಳನ್ನು ಮುಚ್ಚಲಾಗುತ್ತದೆ. ಹತ್ತಿರದ ಟ್ರಿನಿಟಿ ಮತ್ತು ಕಬ್ಬನ್ ಪಾರ್ಕ್ ಮೆಟ್ರೋ ನಿಲ್ದಾಣಗಳಲ್ಲಿ ರೈಲುಗಳು ನಿಲ್ಲುತ್ತವೆ ಎಂದು ಮಾಹಿತಿ ನೀಡಿದರು.

## ಉತ್ತರ ಗಾಝಾದ ಕೊನೆಯ ಆಸ್ಪತ್ರೆ ಮೇಲೆ ದಾಳಿ: ಹಲವರು ಸಜೀವ ದಹನ



■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಉತ್ತರ ಗಾಝಾದ ಕೊನೆಯ ಆಸ್ಪತ್ರೆ ಎನ್ನಲಾದ 'ಕಮಲ್ ಅದ್ವಾನ್' ಮೇಲೆ ಇಸ್ರೇಲ್ ಸೇನೆ ದಾಳಿ ನಡೆಸಿ ಸುಟ್ಟು ಹಾಕಿದೆ ಎಂದು ಅಂತಾರಾಷ್ಟ್ರೀಯ ಮಾಧ್ಯಮಗಳು ವರದಿ ಮಾಡಿವೆ.

ಕಮಲ್ ಅದ್ವಾನ್ ಆಸ್ಪತ್ರೆಯಲ್ಲಿ ಉಗ್ರರು ತಂಗಿದ್ದಾರೆ ಎಂದು ಆರೋಪಿಸಿದ್ದ ಇಸ್ರೇಲ್ ಸೇನೆ ಕೆಲ ದಿನಗಳ ಹಿಂದೆ ಆಸ್ಪತ್ರೆಯನ್ನು ತೊರೆಯುವಂತೆ ಅದರ ಸಿಬ್ಬಂದಿಗೆ ಸೂಚಿಸಿತ್ತು. ಆದರೆ, ಸಮೀಪದಲ್ಲಿ ಬೇರೆ ಆಸ್ಪತ್ರೆಗಳು ಮತ್ತು ಸಾಕಷ್ಟು ಆಂಬ್ಯುಲೆನ್ಸ್‌ಗಳು ಇಲ್ಲದ ಕಾರಣ ಆಸ್ಪತ್ರೆ ಸಿಬ್ಬಂದಿ ಅಸಹಾಯಕತೆ ವ್ಯಕ್ತಪಡಿಸಿದ್ದರು.

ನೂರಾರು ರೋಗಿಗಳು ಮತ್ತು ಇಸ್ರೇಲ್ ದಾಳಿಯಲ್ಲಿ ಗಾಯಗೊಂಡವರು ಬಾಕಿ ಉಳಿದಿರುವ ಏಕೈಕ ಆಸ್ಪತ್ರೆಯನ್ನು ಆಶ್ರಯಿಸಿದ್ದಾರೆ. ಇಲ್ಲಿ ಸರಿಯಾದ ವೈದ್ಯಕೀಯ ಸಾಮಾಗ್ರಿಗಳು ಲಭ್ಯವಿಲ್ಲ. ಆದರೂ, ವಿಶ್ವಸಂಸ್ಥೆಯ ನೆರವಿನಿಂದ ನಾವು ಜನರನ್ನು ಉಳಿಸಿಕೊಳ್ಳುವ ಪ್ರಯತ್ನ ಮಾಡುತ್ತಿದ್ದೇವೆ ಎಂದು ಆಸ್ಪತ್ರೆ ಮುಖ್ಯಸ್ಥರು ತಿಳಿಸಿದ್ದರು.

ಆದರೆ, ಶುಕ್ರವಾರ (ಡಿ.27) ಇಸ್ರೇಲ್ ಸೇನೆ ಆಸ್ಪತ್ರೆಯಲ್ಲಿ ಪರಿಶೀಲನೆ ಆರಂಭಿಸಿತ್ತು. ಆ ಬಳಿಕ ಬೆಂಕಿ ಹಚ್ಚಿದೆ. ಇದರಿಂದ ಕೆಲ ವೈದ್ಯಕೀಯ ಸಿಬ್ಬಂದಿ ಸಜೀವ ದಹನವಾಗಿದ್ದಾರೆ. ಇನ್ನೂ ಕೆಲವರು ಕಿಲೋ ಮೀಟರ್‌ಗಟ್ಟಲೆ ದೂರ ಓಡಿ ಹೋಗಿದ್ದಾರೆ ಎಂದು ಅಲ್–ಜಝೀರಾ ಮತ್ತು ದಿ ನ್ಯೂ ಅರಬ್ ಸುದ್ದಿ ಸಂಸ್ಥೆಗಳು ವರದಿ ಮಾಡಿವೆ.

ಆಸ್ಪತ್ರೆಯ ನಿರ್ದೇಶಕ ಹುಸಾಮ್ ಅಬೂ ಸಫಿಯಾ ಸೇರಿದಂತೆ ಕೆಲ ಸಿಬ್ಬಂದಿಯನ್ನು ಇಸ್ರೇಲ್ ಸೇನೆ ಬಂಧಿಸಿ ಕರೆದುಕೊಂಡು ಹೋಗಿದೆ ಎಂದು ಹಮಾಸ್ ಆರೋಗ್ಯ ಸಚಿವಾಲಯ ಪ್ರಕಟಣೆಯಲ್ಲಿ ತಿಳಿಸಿದ್ದಾಗಿ ವರದಿಯಾಗಿದೆ.

## ಉಪವಾಸ ನಿರತ ರೈತ ನಾಯಕ ದಲ್ಲೆವಾಲ್ ಆಸ್ಪತ್ರೆಗೆ ಸ್ಥಳಾಂತರ ಮಾಡಿ

■ವಿಜಯಸಾಕ್ಷಿ ಸುದ್ದಿ, ನವದೆಹಲಿ


ಒಂದು ತಿಂಗಳಿನಿಂದ ಉಪವಾಸ ಸತ್ಯಾಗ್ರಹ ನಡೆಸುತ್ತಿರುವ ರೈತ ಮುಖಂಡ ಜಗಜಿತ್ ಸಿಂಗ್ ದಲ್ಲೆವಾಲ್ ಅವರನ್ನು ಆಸ್ಪತ್ರೆಗೆ ಸ್ಥಳಾಂತರಿಸುವಂತೆ ಮನವೊಲಿಸಲು ಸುಪ್ರೀಂ ಕೋರ್ಟ್ ಶನಿವಾರ ಪಂಜಾಬ್ ಸರ್ಕಾರಕ್ಕೆ ಡಿಸೆಂಬರ್ 31 ರವರೆಗೆ ಕಾಲಾವಕಾಶ ನೀಡಿದೆ. ವಿಚಾರಣೆ ವೇಳೆ ನ್ಯಾಯಮೂರ್ತಿಗಳಾದ ಸೂರ್ಯ ಕಾಂತ್ ಮತ್ತು ಉಜ್ಜಲ್ ಭುಯಾನ್ ಅವರ ರಜಾಕಾಲದ ಪೀಠವು ಪರಿಸ್ಥಿತಿ ಉಲ್ಬಣಗೊಳ್ಳಲು ಅವಕಾಶ ಮಾಡಿಕೊಟ್ಟಿದ್ದಕ್ಕಾಗಿ ಮತ್ತು ದಲ್ಲೆವಾಲ್‌ಗೆ ವೈದ್ಯಕೀಯ ನೆರವು ನೀಡಲು ಕೋರ್ಟ್ ನೀಡಿದ್ದ ಈ ಹಿಂದಿನ ನಿರ್ದೇಶನಗಳನ್ನು ಅನುಸರಿಸದಿದ್ದಕ್ಕಾಗಿ ಪಂಜಾಬ್ ಸರ್ಕಾರವನ್ನು ತರಾಟೆಗೆ ತೆಗೆದುಕೊಂಡಿತು. ಉಪವಾಸ ನಿರತ ರೈತ ನಾಯಕ

ಈ ವೇಳೆ ತನ್ನ ಅಸಹಾಯಕತೆಯನ್ನು ವ್ಯಕ್ತಪಡಿಸಿದ ಪಂಜಾಬ್ ಸರ್ಕಾರ, ದಲ್ಲೆವಾಲ್ ಅವರನ್ನು ಸುತ್ತುವರಿದು ಅವರನ್ನು ಆಸ್ಪತ್ರೆಗೆ ಕರೆದೊಯ್ಯದಂತೆ ತಡೆದು ಪ್ರತಿಭಟನಾಕಾರು ಭಾರಿ ಪ್ರತಿರೋಧ ವ್ಯಕ್ತಪಡಿಸುತ್ತಿದ್ದಾರೆ ಎಂದು ಹೇಳಿದೆ. ಅಷ್ಟೆ ಅಲ್ಲದೆ, ತಜ್ಞರ ತಂಡವು ಪ್ರತಿಭಟನಾ ಸ್ಥಳಕ್ಕೆ ಭೇಟಿ ನೀಡಿ ದಲ್ಲೆವಾಲ್ ಅವರನ್ನು ಆಸ್ಪತ್ರೆಗೆ ಸ್ಥಳಾಂತರಿಸುವಂತೆ ಮನವೊಲಿಸಲು ಪ್ರಯತ್ನಿಸಿದೆ ಎಂದು ಪಂಜಾಬ್ ಸರ್ಕಾರವನ್ನು ಪ್ರತಿನಿಧಿಸುವ ಅಡ್ವೊಕೇಟ್ ಜನರಲ್ ಗುರ್ಮಿಂದರ್ ಸಿಂಗ್ ಸುಪ್ರೀಂಕೋರ್ಟ್‌ನ ಪೀಠಕ್ಕೆ ತಿಳಿಸಿದ್ದಾರೆ.

"ಅವರು (ದಲ್ಲೆವಾಲ್) ಡ್ರಿಪ್ಸ್ ಸೇರಿದಂತೆ ಯಾವುದೇ ರೀತಿಯ ವೈದ್ಯಕೀಯ ಸಹಾಯವನ್ನು ನಿರಾಕರಿಸಿದ್ದಾರೆ. ಇದು ಚಳುವಳಿಯ ಕಾರಣವನ್ನು ದುರ್ಬಲಗೊಳಿಸುತ್ತದೆ ಎಂದು ಅವರು ಪ್ರತಿಪಾದಿಸುತ್ತಿದ್ದಾರೆ" ಎಂದು ಅವರು ತಿಳಿಸಿದರು. ಅಡ್ವೊಕೇಟ್ ಜನರಲ್ ಅವರ ಈ ಉತ್ತರಕ್ಕೆ ಕೆರಳಿದ ಕೋರ್ಟ್, ಪರಿಸ್ಥಿತಿಯನ್ನು ಹತೋಟಿಯಲ್ಲಿಡಲು ಪಂಜಾಬ್ ಸರ್ಕಾರವು ಸಾಕಷ್ಟು ಪ್ರಯತ್ನ ಮಾಡಿಲ್ಲ ಎಂದು ದೂಷಿಸಿತು.

### ಭಾರತದ ಆರ್ಥಿಕತೆಯ ಹರಿಕಾರ

# ಡಾ. ಮನಮೋಹನ್ ಸಿಂಗ್



ಡಾ. ಮನಮೋಹನ್ ಸಿಂಗ್ ಅವರು ಸೆಪ್ಟೆಂಬರ್ 26, 1932ರಂದು ಗುರುಮುಖ್ ಸಿಂಗ್ ಕುಟುಂಬದಲ್ಲಿ ಜನಿಸಿದರು. ಇಂದಿನ ಪಾಕಿಸ್ತಾನದಲ್ಲಿರುವ ಗಾಹ್‌ನಲ್ಲಿ ಜನಿಸಿದ ಸಿಂಗ್ ಅವರ ಕುಟುಂಬದವರು 1947ರಲ್ಲಿ ವಿಭಜನೆಯ ಸಮಯದಲ್ಲಿ ಭಾರತಕ್ಕೆ ವಲಸೆ ಬಂದರು. ಮನಮೋಹನ್ ಸಿಂಗ್ ಭಾರತದ 14ನೇ ಪ್ರಧಾನಿಯಾಗಿ ಸೇವೆ ಸಲ್ಲಿಸಿದ್ದಾರೆ. ಅವರು ಹೆಸರಾಂತ ಅರ್ಥಶಾಸ್ತ್ರಜ್ಞರಾಗಿದ್ದರು.

ಅಧಿಕಾರದಲ್ಲಿದ್ದ ಮೊದಲ ಸಿಖ್ ಸಿಂಗ್, ಜವಾಹರಲಾಲ್ ನೆಹರು ನಂತರ ಪೂರ್ಣ ಐದು ವರ್ಷಗಳ ಅವಧಿಯನ್ನು ಪೂರ್ಣಗೊಳಿಸಿದ ನಂತರ ಮರು ಆಯ್ಕೆಯಾದ ಮೊದಲ ಪ್ರಧಾನ ಮಂತ್ರಿಯೂ ಡಾ. ಸಿಂಗ್ ಆಗಿದ್ದರು. ಡಾ. ಮನಮೋಹನ್ ಸಿಂಗ್ ಅವರು ಭಾರತವನ್ನು ಪ್ರಬಲ ಆರ್ಥಿಕ ಶಕ್ತಿ ಕೇಂದ್ರವಾಗಲು ಕಾರಣರಾಗಿದ್ದಾರೆ. ಅವರ ಕಠಿಣ ಪರಿಶ್ರಮ ಮತ್ತು ಅವರ ವಿನಮ್ರ, ಮೃದು–ಮಾತನಾಡುವ ವರ್ತನೆಗೆ ಹೆಸರುವಾಸಿಯಾಗಿದ್ದಾರೆ.

ಅವರು ಭಾರತವನ್ನು ಮುಂದಕ್ಕೆ ಕೊಂಡೊಯ್ದ ಜಿಗಿತಗಳಿಗೆ ಮಾತ್ರವಲ್ಲದೆ ಚಿಂತನೆಯ ಮತ್ತು ಸಮಗ್ರತೆಯ ವ್ಯಕ್ತಿಯಾಗಿಯೂ ನೆ ನಪಿಸಿಕೊಳ್ಳುವ ಪ್ರಧಾನಿಯಾಗಿದ್ದಾರೆ. ಡಾ ಸಿಂಗ್ ಅವರ ಅಭಿವೃದ್ಧಿ ಬದ್ಧತೆ ಮತ್ತು ಅವರ ಅನೇಕ ಸಾಧನೆಗಳನ್ನು ಅವರಿಗೆ ನೀಡಲಾದ ಅನೇಕ ಗೌರವಗಳ ಮೂಲಕ ಗುರುತಿಸಲಾಗಿದೆ. ಇವುಗಳಲ್ಲಿ 1987ರಲ್ಲಿ ಪದ್ಮವಿಭೂಷಣ, 1993ರಲ್ಲಿ ವರ್ಷದ ಹಣಕಾಸು ಮಂತ್ರಿಗಾಗಿ ಯುರೋ ಮನಿ ಪ್ರಶಸ್ತಿ, 1993 ಮತ್ತು 1994 ಎರಡು ಬಾರಿ ವರ್ಷದ ಹಣಕಾಸು ಮಂತ್ರಿಗಾಗಿ ಏಷ್ಯಾ ಮನಿ ಪ್ರಶಸ್ತಿ ಮತ್ತು 1995ರಲ್ಲಿ ಭಾರತೀಯ ವಿಜ್ಞಾನ ಕಾಂಗ್ರೆಸ್‌ನ ಜವಾಹರಲಾಲ್ ನೆಹರು ಜನ್ಮ ಶತಮಾನೋತ್ಸವ ಪ್ರಶಸ್ತಿ ಸೇರಿವೆ. ಭಾರತಕ್ಕೆ ಮನಮೋಹನ್ ಸಿಂಗ್ ಅವರು ನೀಡಿದ ಕೊಡುಗೆಗಳು ಅಪಾರವಾಗಿವೆ. ಇಂತಹ ಧೀಮಂತ ನಾಯಕನನ್ನು ಭಾರತ 2024ರ ಡಿಸೆಂಬರ್ 26ರಂದು ಕಳೆದುಕೊಂಡಿತು.



ಅವರ ಆತ್ಮಕ್ಕೆ ಚಿರಶಾಂತಿ ಸಿಗಲಿ ಎಂದು ಭಾರತ ಮಾತೆಂಯಲ್ಲಿ ಕೇಳಿಕೊಳ್ಳೋಣ.


– ಪ್ರಶಾಂತ ಮಡಿವಾಳರ, ಶಿರೋಳ.

### ಕೆಎಸ್‌ಆರ್‌ಟಿಸಿ ಕಾರ್ಮಿಕ ಸಂಘಟನೆಗಳ ಜಂಟಿ ಕ್ರಿಯಾ ಸಮಿತಿಯಿಂದ ಪತ್ರಿಕಾಗೋಷ್ಠಿ

# ಅನಿರ್ದಿಷ್ಟಾವಧಿ ಮುಷ್ಕರಕ್ಕೆ ಸಿದ್ಧತೆ

■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮಗಳ ಕಾರ್ಮಿಕ ಸಂಘಟನೆಗಳ ಜಂಟಿ ಕ್ರಿಯಾ ಸಮಿತಿಯಿಂದ ಡಿ.31ರ ಬೆಳಿಗ್ಗೆ 6 ಗಂಟೆಯಿಂದ ಅನಿರ್ಧಿಷ್ಟಾವಧಿ ಮುಷ್ಕರಕ್ಕೆ ಸಿದ್ಧತೆ ನಡೆದಿದೆ ಎಂದು ಜಂಟಿ ಕ್ರಿಯಾ ಸಮಿತಿಯ ಸಂಚಾಲಕ ಯು.ಎಸ್. ಸೊಪ್ಪಿಮಠ ವಕೀಲರು ಹೇಳಿದರು. ನ'ಗ'ರ'ದ' ಪತ್ರಿಕಾ ಭವನದಲ್ಲಿ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಕೆಎಸ್‌ಆರ್‌ಟಿಸಿ ಸ್ಟಾಫ್ & ವರ್ಕರ್ಸ್ ಫೆಡರೇಶನ್ (ಎಐಟಿಯುಸಿ ಸಂಯೋಜಿತ), ಅಖಿಲ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನೌಕರರ ಮಹಾಮಂಡಳಿ, ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನೌಕರರ ಫೆಡರೇಷನ್ (ಸಿಐಟಿಯು ಸಂಯೋಜಿತ) ಕರಾರಸಾ ಸಂಸ್ಥೆ ಪ.ಜಾ ಮತ್ತು ಪ.ಪಂ ನೌಕರರ ಸಂಘ, ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ಪ.ಜಾ, ಪ.ಪಂ ಅಧಿಕಾರಿಗಳ ಮತ್ತು ನೌಕರರ ಕ್ಷೇಮಾಭಿವೃದ್ಧಿ ಸಂಘ, ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ನೌಕರರ ಸಂಘ, ನಾಲ್ಕೂ ಸಾರಿಗೆ




ನಿಗಮಗಳ ಒಳಗೊಂಡ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮಗಳ ಕಾರ್ಮಿಕ ಸಂಘಟನೆಗಳ ಜಂಟಿ ಕ್ರಿಯಾ ಸಮಿತಿಯು 25.01.2024ರಂದು ಸಾರಿಗೆ ನಿಗಮಗಳು ಸಮಸ್ತ ನೌಕರರ ಪರವಾಗಿ ಬೇಡಿಕೆಗಳ ಪಟ್ಟಿಯನ್ನು ಸಾರಿಗೆ ನಿಗಮಗಳ ಆಡಳಿತ ವರ್ಗ ಹಾಗೂ ರಾಜ್ಯ ಸರ್ಕಾರಕ್ಕೆ ಸಲ್ಲಿಸಿತ್ತು.

ಈವರೆಗೂ ಸರ್ಕಾರದಿಂದಾಗಲಿ ಅಥವಾ ಸಾರಿಗೆ ನಿಗಮಗಳ ಆಡಳಿತ ವರ್ಗದಿಂದಾಗಲಿ ಯಾವುದೇ ಸ್ಪಂದನೆ ಇಲ್ಲದಿರುವುದು ಕಾರ್ಮಿಕರಿಗೆ ಅತೀವ ನಿರಾಶೆ ತಂದಿದೆ. ರಾಜ್ಯದಲ್ಲಿ ಪ್ರತಿದಿನ ಸುಮಾರು ಒಂದು ಕೋಟಿಗೂ ಹೆಚ್ಚಿನ ಜನರನ್ನು ತಲುಪಿಸುವುದು ಹಾಗೂ ಶಕ್ತಿ ಯೋಜನೆಯ ಮೂಲಕ ಸರ್ಕಾರಕ್ಕೆ ಒಳ್ಳೆಯ ಹೆಸರು ತಂದು ಕೊಟ್ಟಿರುವ ನಾಲ್ಕೂ ಸಾರಿಗೆ ನಿಗಮಗಳ ಒಂದು ಲಕ್ಷಕ್ಕೂ ಅಧಿಕ ನೌಕರರ ಬೇಡಿಕೆಗಳ ಬಗ್ಗೆ ತಮ್ಮ ಸರ್ಕಾರ ನಿರ್ಲಕ್ಷ್ಯ ಧೋರಣೆ ತಳೆದಿರುವುದು ಬೇಸರದ ಸಂಗತಿ ಎಂದರು.

ಸಾರಿಗೆ ನೌಕರರ ಬೇಡಿಕೆಗಳಾದ 31.12.2023ರ ಮೂಲವೇತನದ ಶೇ. 25ರಷ್ಟು ಹೆಚ್ಚಳ ಮಾಡಿ ವೇತನ ಶ್ರೇಣಿಗಳನ್ನು ಸಿದ್ಧಪಡಿಸುವುದು, ಇಂಕ್ರಿಮೆಂಟ್ ದರ ಎಲ್ಲಾ ಹಂತಗಳಲ್ಲೂ ಮೂಲವೇತನದ ಶೇ. 4ರಷ್ಟು ಇರಬೇಕು ಇತ್ಯಾದಿ ಆಡಳಿತ ವರ್ಗಕ್ಕೆ ಸಲ್ಲಿಸಿರುವ ಎಲ್ಲಾ ಬೇಡಿಕೆಗಳನ್ನು ಜಂಟಿ ಕ್ರಿಯಾ ಸಮಿತಿ ಜೊತೆ ಚರ್ಚಿಸಿ ಪರಿಹರಿಸಬೇಕು. ನಮ್ಮ ಬೇಡಿಕೆಗಳು ಈಡೇರದಿದ್ದಲ್ಲಿ ಡಿ.31ರಂದು ಬೆಳಿಗ್ಗೆ 6ರಿಂದ ಅನಿರ್ಧಿಷ್ಟಾವಧಿ ಮುಷ್ಕರ ಪ್ರಾರಂಭವಾಗುತ್ತದೆ ಎಂದು ಅವರು ಎಚ್ಚರಿಕೆ ನೀಡಿದರು.

ಪತ್ರಿಕಾಗೋಷ್ಠಿಯಲ್ಲಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮಗಳ ಕಾರ್ಮಿಕ ಸಂಘಟನೆಗಳ ಜಂಟಿ ಕ್ರಿಯಾ ಸಮಿತಿಯ ಸಂಚಾಲಕರುಗಳಾದ ಎ.ಬಿ. ದಿಂಡೂರ, ಹನುಮಂತಪ್ಪ ಅಂಬಿಗೇರ್, ಎಸ್.ಎ. ಗಫಾರ್, ಮಖಬೂಲ್ ರಾಯಚೂರು ಮುಂತಾದವರು ಉಪಸ್ಥಿತರಿದ್ದರು.

## ಬ್ರಾಹ್ಮಣ ಸಮಾಜದ ಸಮಾವೇಶ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಬ್ರಾಹ್ಮಣ ಸಂಘದ ವತಿಯಿಂದ ಜಿಲ್ಲೆಯ ಬ್ರಾಹ್ಮಣ ಸಮಾಜದ ಜಿಲ್ಲಾ ಸಮಾವೇಶ, ಸಾಧಕರಿಗೆ ಸನ್ಮಾನ ಹಾಗೂ 2025ನೇ ಸಾಲಿನ ದಿನದರ್ಶಿಕೆ ಬಿಡುಗಡೆ ಸಮಾರಂಭವನ್ನು ಸಂಭಾಪುರ ರಸ್ತೆಯ ಶಂಕರ ಮಠದಲ್ಲಿ ಡಿ. 29ರಂದು ಬೆಳಿಗ್ಗೆ 10 ಗಂಟೆಗೆ ಆಯೋಜಿಸಲಾಗಿದೆ ಎಂದು ಸಂಘದ ಅಧ್ಯಕ್ಷ ವೆಂಕಟೇಶ ಕುಲಕರ್ಣಿ ಹೇಳಿದರು.




ಶುಕ್ರವಾರ ಇಲ್ಲಿನ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಕಾನೂನು ಹಾಗೂ ಪ್ರವಾಸೋದ್ಯಮ ಇಲಾಖೆ ಸಚಿವ ಎಚ್.ಕೆ. ಪಾಟೀಲ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ಸವದತ್ತಿ ಕ್ಷೇತ್ರದ ಶಾಸಕ ವಿಶ್ವಾಸ ವೈದ್ಯ, ರೋಣ ಶಾಸಕ ಜಿ.ಎಸ್. ಪಾಟೀಲ, ನರಗುಂದ ಶಾಸಕ ಸಿ.ಸಿ. ಪಾಟೀಲ, ಶಿರಹಟ್ಟಿ ಶಾಸಕ ಡಾ. ಚಂದ್ರು ಲಮಾಣಿ, ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ, ತಹಸೀಲ್ದಾರ್ ಶ್ರೀನಿವಾಸಮೂರ್ತಿ ಕುಲಕರ್ಣಿ ಸೇರಿದಂತೆ ಗಣ್ಯರು ಪಾಲ್ಗೊಳ್ಳಲಿದ್ದಾರೆ ಎಂದರು.

ಬ್ರಾಹ್ಮಣ ಸಂಘ ಸಮಾಜ ಹಾಗೂ ಸರಕಾರದ ನಡುವೆ ಸೇತುವೆಯಾಗಿ ಕೆಲಸ ಮಾಡುತ್ತಿದೆ. ಸಮಾಜ ಎದುರಿಸುತ್ತಿರುವ ಸವಾಲುಗಳಿಗೆ ಪರಿಹಾರ ಕಂಡುಕೊಳ್ಳುವ ಉದ್ದೇಶದಿಂದ ಈ ಸಮಾವೇಶವನ್ನು ಹಮ್ಮಿಕೊಳ್ಳಲಾಗಿದೆ. ಈ ಕುರಿತು ಅನೇಕ ತಜ್ಞರು ಸಮಾರಂಭದಲ್ಲಿ ತಮ್ಮ ಅನಿಸಿಕೆಗಳನ್ನು ಹಂಚಿಕೊಳ್ಳಲಿದ್ದಾರೆ ಎಂದರು.

ಈ ಸಂದರ್ಭದಲ್ಲಿ ವೈದಿಕ ವಿದ್ವಾಂಸ ರತ್ನಾರಭಟ್ ಜೋಶಿ, ಶ್ರೀನಿವಾಸ ಹುಯಿಲಗೋಳ, ಅನಿಲ ತೆಂಬದಮನಿ, ದತ್ತಣ್ಣ ಜೋಶಿ, ರವೀಂದ್ರ ಜೋಶಿ ಮುಂತಾದವರಿದ್ದರು.

## ಪ್ರಿನ್ಸಸ್ ರಸ್ತೆಗೆ ಸಿದ್ದರಾಮಯ್ಯ ಹೆಸರು ಇಟ್ಟರೇನು ತಪ್ಪಿಲ್ಲ; ದೇವೇಗೌಡ

■ವಿಜಯಸಾಕ್ಷಿ ಸುದ್ದಿ, ಮೈಸೂರು



ಮೈಸೂರಿನ ಪ್ರಿನ್ಸೆಸ್ ಅಥವಾ ರಾಜಕುಮಾರಿ ರಸ್ತೆಗೆ ಸಿಎಂ ಸಿದ್ದರಾಮಯ್ಯನವರ ಹೆಸರು ಇಡುವ ವಿಚಾರ ದೊಡ್ಡ ಚರ್ಚೆಗೆ ಬಂದಿದೆ. ಈ ವಿಚಾರವಾಗಿ ಶಾಸಕ ಜಿಟಿ ದೇವೇಗೌಡ ಮಾತನಾಡಿದ್ದಾರೆ. ಆ ರಸ್ತೆಗೆ ಪ್ರಿನ್ಸಸ್ ರಸ್ತೆ ಅಂತ ನಾಮಕರಣ ಮಾಡಿಲ್ಲ ಅನ್ನುವುದಾದರೆ ಸಿದ್ದರಾಮಯ್ಯ ಅವರ ಹೆಸರನ್ನ ಇಟ್ಟರೇನು ತಪ್ಪಿಲ್ಲ ಎಂದು ಹೇಳಿದ್ದಾರೆ.

ಈಗಾಗಲೇ ಸಾಕಷ್ಟು ಚರ್ಚೆಗಳ ನಡೆಯುತ್ತಿವೆ ಅದರ ಬಗ್ಗೆ ನನಗೆ ಗೊತ್ತಿಲ್ಲ. ಸಂಸದ ಯದುವೀರ್ ಅವರು ಹೇಳಿವಂತೆ ಆ ರಸ್ತೆಗೆ ಪ್ರಿನ್ಸಸ್ ರಸ್ತೆ ಎಂದು ಹೆಸರಿಡಲಾಗಿದೆ ಎನ್ನುತ್ತಾರೆ. ಆದರೆ ಮತ್ತೆ ಕೆಲವರು ಆ ರಸ್ತೆಗೆ ಯಾವ ಹೆಸರನ್ನು ಇಟ್ಟಿಲ್ಲ ಎನ್ನುತ್ತಾರೆ. ಒಂದು ವೇಳೆ ಹೆಸರಿಟ್ಟಿಲ್ಲದಿದ್ದರೆ ಸಿದ್ದರಾಮಯ್ಯ ಅವರ ಹೆಸರು ಇಟ್ಟರೆ ತಪ್ಪಿಲ್ಲ ಎಂದು ಜಿಟಿ ದೇವೇಗೌಡ ಸಿಎಂ ಸಿದ್ದರಾಮಯ್ಯ ಪರ ಬ್ಯಾಟ್ ಬೀಸಿದ್ದಾರೆ.

## ಶಿರೋಳ ಗ್ರಾಮಸ್ಥರಿಂದ ಡಾ. ಸಿಂಗ್‌ರಿಗೆ ಶ್ರದ್ಧಾಂಜಲಿ



■ವಿಜಯಸಾಕ್ಷಿ ಸುದ್ದಿ, ನರಗುಂದ

ತಾಲೂಕಿನ ಶಿರೋಳ ಗ್ರಾಮದಲ್ಲಿ ಆರ್ಥಿಕ ತಜ್ಞ, ಮಾಜಿ ಪ್ರಧಾನಿಗಳಾದ ಡಾ. ಮನಮೋಹನ್ ಸಿಂಗ್ ಅವರಿಗೆ ಗ್ರಾಮಸ್ಥರಿಂದ ಶ್ರದ್ಧಾಂಜಲಿ ಸಲ್ಲಿಸಲಾಯಿತು.

ದ್ಯಾಮಣ್ಣ ಕಾಡಪ್ಪನವರ ಮಾತನಾಡಿ, ದೇಶಕ್ಕೆ ಮನಮೋಹನ್ ಸಿಂಗ್ ಅವರ ಕೊಡುಗೆ ಅನನ್ಯವಾದುದು. ಸುದೀರ್ಘ 10 ವರ್ಷಗಳ ಕಾಲ ದೇಶದ ಪ್ರಧಾನಿಯಾಗಿ, ದೇಶದ ವಿತ್ತ ಸಚಿವರಾಗಿ, ರಿಸರ್ವ್ ಬ್ಯಾಂಕಿನ ಗವರ್ನರ್ ಆಗಿ ದೇಶಕ್ಕೆ ಸೇವೆ ಸಲ್ಲಿಸಿದ್ದಾರೆ ಎಂದರು.

ಗ್ರಾ.ಪಂ ಸದಸ್ಯ ಈಶ್ವರಗೌಡ ತಿರಕನಗೌಡ್ರ ಮಾತನಾಡಿ, ಡಾ. ಸಿಂಗ್ ಭಾರತ ಸೇರಿದಂತೆ ವಿಶ್ವದ ಅನೇಕ ರಾಷ್ಟ್ರಗಳಿಗೆ ಆರ್ಥಿಕ ಸಲಹೆ ನೀಡಿದ ಆರ್ಥಿಕ ತಜ್ಞರಾಗಿದ್ದಾ–ರೆ. ದೇಶ ಆರ್ಥಿಕ ಸಂಕಷ್ಟದಲ್ಲಿ ಸಿಲುಕಿದಾಗ ದೇಶದ ಆರ್ಥಿಕತೆಯನ್ನು ಪುನಶ್ಚೇತನಗೊಳಿಸುವಲ್ಲಿ ಮನಮೋಹನ್ ಸಿಂಗ್‌ರ ಪಾತ್ರ ಅಪಾರವಾದುದು ಎಂದರು.

ಈ ಸಂದರ್ಭದಲ್ಲಿ ಈರಪ್ಪ ಕರ್ಕಿಕಟ್ಟಿ, ಬಸಯ್ಯ ಮಠದ, ಗಂಗಪ್ಪ ಕೊಣ್ಣೂರ, ಶಂಕ್ರಪ್ಪ ಮುಚ್ಚಗಂಡಿ, ಉಮೇಶ ಶಾಂತಗೇರಿ, ಶಿವಪ್ಪ ಕುರಿ, ಶ್ಯಾಮು ಕಲಾಲ್, ದ್ಯಾಮಣ್ಣ ಮುಷ್ಟಿಗೇರಿ, ಜ್ಞಾನೇಶ ಪಾರ್ಗೆ, ಮಾರುತಿ ಕುರಿ, ಬೀರಪ್ಪ ಕುರಿ, ಗುರುಬಸಯ್ಯ ನಾಗಲೋಟಿಮಠ, ಬಸವರಾಜ ಚವಡಿ, ಯಮನಪ್ಪ ಹಿರೇಮನಿ, ದಾದಾಫೀರ ಖಲಿಫ್, ರಾಜೇಸಾಬ ಚಳ್ಳಮರದ, ಅಕ್ಷಯ ಗಡೆಕಾರ, ಮುತ್ತಪ್ಪ ಜಂಗಿನ, ಮಂಜುನಾಥ ಬಡಿಗೇರ ಸೇರಿದಂತೆ ಗ್ರಾಮಸ್ಥರು ಇದ್ದರು.

## ಕಾಂಗ್ರೆಸ್ ಕಾರ್ಯಕರ್ತರ ಕೊಲೆ ಪ್ರಕರಣ: ಮಾಜಿ ಶಾಸಕ ಸೇರಿ 14 ಜನ ದೋಷಿ !

■ವಿಜಯಸಾಕ್ಷಿ ಸುದ್ದಿ, ಕೇರಳ

ಕೇರಳದ ಕಾಸರಗೋಡಿನ ಪೆರಿಯದಲ್ಲಿ 2019ರಲ್ಲಿ ನಡೆದ ಇಬ್ಬರು ಯುವ ಕಾಂಗ್ರೆಸ್ ಕಾರ್ಯಕರ್ತರ ಕೊಲೆ ಪ್ರಕರಣದ 14 ಮಂದಿ ಆರೋಪಿಗಳನ್ನು ದೋಷಿಗಳೆಂದು ಘೋಷಿಸಿ ಕೊಚ್ಚಿಯ ಸಿಬಿಐ ವಿಶೇಷ ನ್ಯಾಯಾಲಯ ಇಂದು (ಡಿ.28) ತೀರ್ಪು ಪ್ರಕಟಿಸಿದೆ.

ಪ್ರಕರಣದ ಇತರ 10 ಆರೋಪಿಗಳನ್ನು ನ್ಯಾಯಾಲಯ ಖುಲಾಸೆಗೊಳಿಸಿದೆ. 14 ಅಪರಾಧಿಗಳ ಶಿಕ್ಷೆಯನ್ನು ಜನವರಿ 3,2025ರಂದು ಪ್ರಕಟಿಸಲಿದೆ. ಕಳೆದ 6 ವರ್ಷಗಳಿಂದ ಈ ಪ್ರಕರಣದ ವಿಚಾರಣೆ ನಡೆಯುತ್ತಿತ್ತು.

ಪ್ರಮುಖ ಸಿಪಿಐ(ಎಂ) ಮುಖಂಡರಾದ ಮಾಜಿ ಶಾಸಕ ಹಾಗೂ ಸಿಪಿಎಂ ಜಿಲ್ಲಾ ನಾಯಕ ಕೆ.ವಿ.ಕುಂಞಟಿಜಜಜಿಟಿಜಜರಾಮನ್, ಕಾಞಂಗಾಡ್ ಬ್ಲಾಕ್ ಪಂಚಾಯತ್ ಅಧ್ಯಕ್ಷ ಕೆ.ಮಣಿಕಂಠನ್, ಪೆರಿಯ ಸ್ಥಳೀಯ ಸಮಿತಿ ಮಾಜಿ ಸದಸ್ಯ ಎ.ಪೀತಾಂಬರನ್, ಪೆರಿಯ ಸ್ಥಳೀಯ ಸಮಿತಿಯ ಮಾಜಿ ಕಾರ್ಯದರ್ಶಿ ಎನ್.ಬಾಲಕೃಷ್ಣನ್, ಪಕ್ಕಂ ಸ್ಥಳೀಯ ಸಮಿತಿಯ ಮಾಜಿ ಕಾರ್ಯದರ್ಶಿ ರಾಘವನ್ ವೆಲುತ್ತೋಳಿ, ಸಿಐಟಿಯು ಮುಖಂಡ ಎ ಸುಭೀಶ್ ಮತ್ತು ಸಿಪಿಐ(ಎಂ) ಎಚಿಲಡುಕ್ಕಂ ಶಾಖೆಯ ಮಾಜಿ ಕಾರ್ಯದರ್ಶಿ ರಾಜೇಶ್ ಸೇರಿದಂತೆ ಒಟ್ಟು 24 ಮಂದಿ ಪ್ರಕರಣದಲ್ಲಿ ವಿಚಾರಣೆ ಎದುರಿಸಿದ್ದರು.

ಈ ಪೈಕಿ, ಪೀತಾಂಬರನ್, ಸಾಜಿ ಜಾರ್ಜ್, ಕೆ.ಎಂ ಸುರೇಶ್, ಕೆ. ಅನಿಲ್‌ಕುಮಾರ್, ಜಿಜಿನ್, ಶ್ರೀರಾಗ್, ಅಶ್ವಿನ್, ಸುಧೀಶ್, ರೆಂಜಿತ್, ಸುರೇಂದ್ರನ್, ಮಣಿಕಂಠನ್, ಕುಂಞಟಿಜಜಜಿಟಿಜಜರಾಮನ್, ವೆಲುತ್ತೋಳಿ ರಾಘವನ್ ಮತ್ತು ಎ.ವಿ. ಭಾಸ್ಕರನ್ ಅವರನ್ನು ದೋಷಿಗಳೆಂದು ನ್ಯಾಯಾಲಯ ಘೋಷಿಸಿದೆ.

# ಖಾಯಂ ಪೌರಾಯುಕ್ತರನ್ನು ನೇಮಿಸಿ



■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ – ಬೆಟಗೇರಿ ನಗರಸಭೆಯು ಒಂದೊಮ್ಮೆ ಅತ್ಯುತ್ತಮ ನಗರಸಭೆ ಎಂದು ಬಿರುದು ಪಡೆದಿತ್ತು. ಆದರೆ ಇಂದಿನ ಆಡಳಿತ ವ್ಯವಸ್ಥೆಯನ್ನು ನೋಡಿದರೆ ನಗರಸಭೆಯಲ್ಲಿ ಖಾಸಗಿ ವ್ಯಕ್ತಿಗಳ ಕಾರುಬಾರು ಹೆಚ್ಚಿದೆ ಎಂದು ಮುಖಂಡರಾದ ಸತೀಶ ಎಚ್. ಹೂಲಿ ಖಂಡಿಸಿದ್ದಾರೆ. ನಗರಸಭೆಯಲ್ಲಿ ಬಹುಪಾಲು ಹೊರಗುತ್ತಿಗೆ ಆಧಾರದ ಮೇಲಿರುವ ವ್ಯಕ್ತಿಗಳು ಕೆಲಸವನ್ನು ನಿರ್ವಹಿಸುತ್ತಿದ್ದಾರೆ. ಅವಳಿ ನಗರದ 35 ವಾರ್ಡ್‌ಗಳಲ್ಲಿ ಬರುವ ಸಾರ್ವಜನಿಕರ ಆಸ್ತಿ ಮತ್ತು ನೀರಿನ ಕರವನ್ನು ವಸೂಲಿ ಮಾಡಲು ನೌಕರರು ಬೇಕಾಗುವುದು 35 ಜನ. ಆದರೆ ಖಾಯಂ ನೌಕರರು 6 ಜನ ಮಾತ್ರ. ಅಲ್ಲಿ ಕೂಡ ಖಾಸಗಿ ವ್ಯಕ್ತಿಗಳು ತಮ್ಮ ಮನಬಂದಂತೆ ಕೆಲಸ ಮಾಡುತ್ತಿದ್ದಾರೆ. ಪಿ.ಡಬ್ಲ್ಯೂ.ಡಿ. ವಿಭಾಗದಲ್ಲಿಯೂ ಸುಮಾರು 8 ಜನ ಖಾಸಗಿ ವ್ಯಕ್ತಿಗಳು ಇಲಾಖೆಯ ಕೆಲಸವನ್ನು ನಿರ್ವಹಣೆ ಮಾಡುತ್ತಿದ್ದಾರೆ.

ಒಂದು ವರ್ಷದಿಂದ ಗದಗ–ಬೆಟಗೇರಿ ನಗರಸಭೆಗೆ ಖಾಯಂ ಪೌರಾಯುಕ್ತರು ಇಲ್ಲದಿರುವುದು ಈ ಎಲ್ಲ ಸಮಸ್ಯೆಗಳಿಗೆ ಕಾರಣವಾಗಿದ್ದು, ಸಂಬಂಧಿಸಿದ ಇಲಾಖೆಯವರು ಈ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಅವರು ಪ್ರಕಟಣೆಯಲ್ಲಿ ಒತ್ತಾಯಿಸಿದ್ದಾರೆ.

### ಸಮೃದ್ಧ ರಾಷ್ಟ್ರ ನಿರ್ಮಾಣಕ್ಕಾಗಿ ರೈತರನ್ನು ಸಶಕ್ತರನ್ನಾಗಿಸುವ ಸಂಕಲ್ಪ

# ಈಶ್ವರೀಯ ವಿ.ವಿಯಿಂದ ರೈತರಿಗೆ ಸಮ್ಮಾನ

■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಸಮೃದ್ಧ ರಾಷ್ಟ್ರ ನಿರ್ಮಾಣಕ್ಕಾಗಿ ಅನ್ನದಾತ ರೈತರನ್ನು ಸಶಕ್ತರನ್ನಾಗಿ ಮಾಡಬೇಕಾಗಿದ್ದು, ನೂತನ ವರ್ಷವನ್ನು ರೈತರ ಏಳ್ಗೆಗಾಗಿ ಬ್ರಹ್ಮಕುಮಾರಿ ಈಶ್ವರೀಯ ವಿಶ್ವ ವಿದ್ಯಾಲಯವು ಭಗವಂತನಲ್ಲಿ ಸಂಕಲ್ಪ ಮಾಡುವ ಕಾರ್ಯಕ್ರಮವನ್ನು ಹಮ್ಮಿಕೊಂಡಿದೆ ಎಂದು ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದ ಧಾರವಾಡ ವಲಯದ ಸಂಚಾಲಕಿ ಬಿ.ಕೆ ಜಯಂತಿ ಅಕ್ಕನವರ ಹೇಳಿದರು.

ಇಲ್ಲಿಯ ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿಶ್ವ ವಿದ್ಯಾಲಯದ ಶಾಖೆಯಲ್ಲಿ ಹಮ್ಮಿಕೊಂಡಿದ್ದ 2025ರ ನೂತನ ವರ್ಷಾಚರಣೆ ಅಂಗವಾಗಿ ರಾಷ್ಟ್ರೀಯ ರೈತ ದಿನಾಚರಣೆ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಅವರು ಮಾತನಾಡುತ್ತಿದ್ದರು.

ನಮ್ಮ ದೇಶದ ಬೆನ್ನೆಲುಬಾಗಿರುವ ರೈತರನ್ನು ದೈಹಿಕ ಮತ್ತು ಆಂತರಿಕವಾಗಿ ಸಶಕ್ತರನ್ನಾಗಿ ಮಾಡಬೇಕಾಗಿದ್ದು, ಅವರ ಆತ್ಮ ಶಕ್ತಿಯನ್ನು ಅಧಿಕಗೊಳಿಸಬೇಕಾಗಿದೆ. ಕಾರಣ, ಇಂದಿನ ಹವಾಮಾನ ವೈಪರಿತ್ಯ, ದರ ಕುಸಿತದಿಂದ ನಷ್ಟ ಅನುಭವಿಸುತ್ತಿರುವ ರೈತರು ಆಂತರಿಕವಾಗಿ ಕುಗ್ಗುತ್ತಿದ್ದಾರೆ. ಇದರಿಂದ ಮದ್ಯಪಾನದಂತ ದುಶ್ಚಟದ ದಾಸರಾಗಿ ಅನಾರೋಗ್ಯ ಪೀಡಿತರಾಗುತ್ತಿದ್ದಾರೆ. ಆದ್ದರಿಂದ ನೆಮ್ಮದಿಯ ಜೀವನ ಸಾಗಿಸಲು, ದುಶ್ಚಟದಿಂದ ದೂರವಿರಲು ಜ್ಞಾನ, ಯೋಗ, ಧಾರಣೆ ಮತ್ತು ಸಾಧನೆಯ ಪಾಠಗಳ ಮೂಲಕ ಪರಮಾತ್ಮನ ಪರಿಚಯವನ್ನು ಮಾಡಿಕೊಡಬೇಕಾಗಿದೆ. ಅವರ ಆತ್ಮಕ್ಕೆ ಒಳ್ಳೆಯ ಸಂಸ್ಕಾರ ನೀಡಬೇಕಾಗಿದೆ. ಆದ್ದರಿಂದ ಇಂದಿನಿಂದ ನಾವೆಲ್ಲರೂ ರೈತರ ಅಭಿವೃದ್ಧಿಗಾಗಿ ಸಮೃದ್ಧ ರಾಷ್ಟ್ರಕ್ಕಾಗಿ ಸಂಕಲ್ಪ ಮಾಡಬೇಕು ಎಂದು ಸಲಹೆ ನೀಡಿದರು.



ನಿವೃತ್ತ ಯೋಧ, ರೈತ ದತ್ತಾತ್ರೇಯ ಜೋಶಿ ಮಾತನಾಡಿ ಸೈನಿಕನಾಗಿ ದೇಶ ಸೇವೆಯಲ್ಲಿ ತೊಡಗಿಕೊಂಡಿದ್ದು ತೃಪ್ತಿ ತಂದಿದೆ. ನಿವೃತ್ತಿ ನಂತರ ಕೃಷಿಯನ್ನು ಅಳವಡಿಸಿಕೊಂಡು ಎತ್ತು, ಆಕಳುಗಳೊಂದಿಗೆ ಕೃಷಿಯನ್ನು ಮಾಡುತ್ತಿದ್ದೇನೆ. ಪ್ರತಿಯೊಬ್ಬರೂ ಗೋವನ್ನು ಸಾಕುವದರಿಂದ ಮನೆಯಲ್ಲಿ ಧನಾತ್ಮಕ ಚಟುವಟಿಕೆಗಳು ನಡೆಯುತ್ತವೆ ಎಂದರು.

ಫಕ್ಕೀರಗೌಡ್ರ ಪವಾಡಿಗೌಡ್ರ, ಗುರುಶಾಂತ ಅರಹುಣಶಿ, ಈರಪ್ಪ ಗುಂಡಳ್ಳಿ, ಪ್ರಭು ಬೆಂತೂರು, ಶಿವಪುತ್ರಪ್ಪ ರಿತ್ತಿ, ಲಕ್ಷ್ಮಣಪ್ಪ, ನಿಡಗುಂದಿ, ಪುತ್ರಪ್ಪ ಸೊರಟೂರು, ಸಣ್ಣಕೊಟ್ರಪ್ಪ ಶಿಗ್ಲಿ, ಹನುಮಂತಪ್ಪ ಹಿರೇಹಾಳ, ಆನಂದ ಕವಲೂರು, ಮಲ್ಲಿಕಾರ್ಜುನ ಅಡವಿಸೋಮಾಪೂರ, ಈರಣ್ಣ ಹರ್ತಿ, ಶೆಟ್ಟೆಪ್ಪ ಹೊನ್ನರೆಡ್ಡಿ ಅವರನ್ನು ಸನ್ಮಾನಿಸಲಾಯಿತು.

ಕತ್ತಲೆಯಿಂದ ಬೆಳಕಿನೆಡೆಗೆ ಸಾಗುವ ನಂದಾ ಜ್ಯೋತಿಯನ್ನು ಬೆಳಗುವದರೊಂದಿಗೆ ನೂತನ ವರ್ಷವನ್ನು ಸ್ವಾಗತಿಸಿ ಪಾಕೆಟ್ ಕ್ಯಾಲೆಂಡರ್ ಬಿಡುಗಡೆ ಮಾಡಲಾಯಿತು. ಸಮೃದ್ಧ ರಾಷ್ಟ್ರ ನಿರ್ಮಾಣಕ್ಕಾಗಿ ಅನ್ನದಾತ ರೈತರನ್ನು ಸಶಕ್ತರನ್ನಾಗಿ ಮಾಡುವ ಸಂಕಲ್ಪ ಮಾಡಲಾಯಿತು. ಆರ್.ಎನ್. ಗೌಡರ ಸ್ವಾಗತಿಸಿದರು. ಬ್ರಹ್ಮಕುಮಾರಿ ಶಾಖೆಯ ಬಿ.ಕೆ. ಸರೋಜಕ್ಕ ನಿರೂಪಿಸಿದರು.

> ಭಾರತೀಯ ಕಿಸಾನ್ ಸಂಘದ ತಾಲೂಕಾಧ್ಯಕ್ಷ ವೆಂಕಟೇಶ ದೊಂಗಡೆ ಮಾತನಾಡಿ, ಗೋ ಆಧಾರಿತ ಕೃಷಿಯನ್ನು ಅಳವಡಿಸಿಕೊಂಡು ಸಾವಯವ ಗೊಬ್ಬರವನ್ನು ಹಾಕಿ ವಿಷಮುಕ್ತ ಆಹಾರವನ್ನು ತಯಾರಿಸಲು ರೈತರು ಮುಂದಾಗಬೇಕು. ಗೋ ಸಂತತಿಯನ್ನು ಅಧಿಕ ಮಾಡಬೇಕು ಎಂದರು.

### ಕೆ.ಎಸ್.ಎಸ್ ಕಾಲೇಜ್‌ನಲ್ಲಿ ಸಂವಿಧಾನ ಸಮ್ಮಾನ, ವಿದ್ಯಾರ್ಥಿಗಳೊಂದಿಗೆ ಸಂವಾದ ಕಾರ್ಯಕ್ರಮ

# ಡಾ. ಅಂಬೇಡ್ಕರರ ಜೀವನ ಅರಿಯಿರಿ

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಡಾ. ಬಿ.ಎಫ್. ದಂಡಿನ ಸಂಸ್ಥಾಪಕ ವಿದ್ಯಾಸಂಸ್ಥೆಯ ಕೆ.ಎಸ್.ಎಸ್ ಕಾಲೇಜ್‌ನಲ್ಲಿ ಸಂವಿಧಾನ ಸಮ್ಮಾನ ಕಾರ್ಯಕ್ರಮ ಹಾಗೂ ವಿದ್ಯಾರ್ಥಿಗಳೊಂದಿಗೆ ಸಂವಾದ ಕಾರ್ಯಕ್ರಮ ಇತ್ತೀಚೆಗೆ ಜರುಗಿತು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ನಾಗರಾಜ ಕುಲಕರ್ಣಿ ಪಾಲ್ಗೊಂಡು ಮಾತನಾಡಿ, ಭಾರತದ ಸಂವಿಧಾನ ಇತ್ತೀಚಿನ ದಿನಗಳಲ್ಲಿ ಪಂಚಾಯತ್‌ಗಳಿಂದ ಪಾರ್ಲಿಮೆಂಟ್‌ವರೆಗೆ ಹೆಚ್ಚು ಚರ್ಚೆಯ ವಿಷಯವಾಗಿದೆ. ಕಳೆದ ವಿಧಾನಸಭೆಯಲ್ಲಿ ವಿಶ್ವೇಶ್ವರ ಹೆಗಡೆ ಕಾಗೇರಿಯವರು ಸಭಾಧ್ಯಕ್ಷರಿದ್ದಾಗ ಸಂವಿಧಾನದ ಕುರಿತಾದ ದೀರ್ಘವಾದ ಚರ್ಚೆ ಆಗಿದ್ದನ್ನು ನಾವು ನೋಡಿದ್ದೇವೆ. ಡಾ. ಬಾಬಾಸಾಹೇಬ್ ಅಂಬೇಡ್ಕರ್ ಅತ್ಯಂತ ಅಧ್ಯಯನಪೂರ್ಣವಾದ ಮಾನವಿ ಮೌಲ್ಯಗಳನ್ನು ಒಳಗೊಂಡ ಶ್ರೇಷ್ಠ ಸಂವಿಧಾನವನ್ನು ನಮಗೆ ನೀಡಿದ್ದಾರೆ. ಹಾಗಾಗಿ ಅಂಬೇಡ್ಕರರ ಚಿಂತನೆ ಹಾಗೂ ನಡೆದುಬಂದ ದಾರಿಯನ್ನು ಇಂದಿನ ಪೀಳಿಗೆ ಅಧ್ಯಯನ ಮಾಡುವುದರಿಂದ ಅಂಬೇಡ್ಕರರ ನಿಜವಾದ ಜೀವನದ ಘಟನಾವಳಿಗಳನ್ನು ತಿಳಿಯಲು ಸಾಧ್ಯ. ಕಾಂಗ್ರೆಸ್ ಸರ್ಕಾರದ ಅವಧಿಯಲ್ಲಿ ಅತೀ ಹೆಚ್ಚು ಸಂವಿಧಾನ ತಿದ್ದುಪಡಿ ಮಾಡಿ ಸಂವಿಧಾನದ ಆಶಯಕ್ಕೆ ಭಂಗ ತರುವ ಕೆಲಸವನ್ನು ಮಾಡಿದೆ ಎಂದರು.



ರಮೇಶ ಸಜ್ಜಗಾರ ಮಾತನಾಡಿ, ಡಾ. ಬಿ.ಆರ್. ಅಂಬೇಡ್ಕರ್ ಅವರು 32 ಪದವಿಯನ್ನು ಪಡೆದು ಅಂದಿನ ಕಾಲದ ವಿಶ್ವದ ಶ್ರೇಷ್ಠ ಜ್ಞಾನವಂತರಲ್ಲಿ ಒಬ್ಬರಾಗಿದ್ದರು. ಆದರೆ ಅವರನ್ನು ನೆಹರು ಕಾಲದಲ್ಲಿ ಚುನಾವಣೆಯ ಸ್ಪರ್ಧೆಯಲ್ಲಿ ಅವರ ವಿರುದ್ಧ ಅವರ ಆಪ್ತ ಸಹಾಯಕನಿಂದಲೇ ಕಾಂಗ್ರೆಸ್ ಸೋಲಿಸಿತು. ಅಂಬೇಡ್ಕರರಿಗೆ ಭಾರತರತ್ನ ಪ್ರಶಸ್ತಿ ನೀಡಲು ಕಾಂಗ್ರೆಸೇತರ ಸರ್ಕಾರ ಬರಬೇಕಾಯಿತು. ಹೀಗಾಗಿ ಅಂಬೇಡ್ಕರ್ ಸಾಗಿ ಬಂದ ನಿಜವಾದ ದಾರಿಯನ್ನು ನಾವು ಅಧ್ಯಯನ ಮಾಡಿದರೆ ಅಂಬೇಡ್ಕರರ ವಾಸ್ತವ ಬದುಕು ನಮಗೆ ಪ್ರೇರಣೆಯಾಗುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಡಾ. ಕಮಲಾಕ್ಷೀ ಅಂಗಡಿ ಮಾತನಾಡಿದರು. ಈ ಸಂದರ್ಭದಲ್ಲಿ ಪ್ರಿನ್ಸಿಪಾಲರಾದ ಡಿ.ಬಿ. ಗವಾನಿ, ಉಮೇಶ ಹಿರೇಮಠ, ಉಪನ್ಯಾಸಕರಾದ ಸತೀಶ ಪಾಸಿ, ಸಿಬ್ಬಂದಿವರ್ಗ ಹಾಗು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಪದಾಧಿಕಾರಿಗಳಿಗೆ ಪದವಿ ಪ್ರದಾನ



■ ವಿಜಯಸಾಕ್ಷಿ ಸುದ್ದಿ, ಗದಗ

ಹಿಂದುಳಿದ ಮತ್ತು ಅಲ್ಪಸಂಖ್ಯಾತರ ಹಿತ ರಕ್ಷಣಾ ವೇದಿಕೆ ಗದಗ ಸಂಘಟನೆಯ ಉದ್ಘಾಟನೆ, ಪದಾಧಿಕಾರಿಗಳಿಗೆ ಪದವಿ ಪ್ರದಾನ ಮತ್ತು ಲಾಂಛನ ಬಿಡುಗಡೆ ಕಾರ್ಯಕ್ರಮವನ್ನು ನಗರದ ಪ್ರವಾಸಿ ಮಂದಿರದಲ್ಲಿ ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮವನ್ನು ಉದ್ಘಾಟಿಸಿದ ದಲಿತ ಸಂಘರ್ಷ ಸಮಿತಿಯ ವೆಂಕಟೇಶಯ್ಯ ಮಾತನಾಡಿದರು. ಮುಖ್ಯ ಅತಿಥಿಗಳಾಗಿ ಆಗಮಿಸಿದ ಅಂಬೇಡ್ಕರ್ ಅಧ್ಯಯನ ಕೇಂದ್ರದ ಎಸ್.ಎನ್. ಬಳ್ಳಾರಿ ದಲಿತ ಸಂಘರ್ಷ ಸಮಿತಿಯ ರಾಜ್ಯಮಟ್ಟದ ಸಾಧನೆಗಳನ್ನು ತಿಳಿಸಿದರು.

ಸಭೆಯಲ್ಲಿ ಹಾಜರಿದ್ದ ಅಂಜುಮನ್ ಇಸ್ಲಾಂ ಕಮಿಟಿಯ ಯೂಸುಫ್ ನಮಾಜಿ ಪ್ರಸ್ತುತ ಸಮಾಜದಲ್ಲಿ ಅಲ್ಪಸಂಖ್ಯಾತ ಹಾಗೂ ಹಿಂದುಳಿದ ವರ್ಗಗಳ ಜನರ ಮೇಲೆ ಆಗುತ್ತಿರುವ ಅನ್ಯಾಯ, ದಬ್ಬಾಳಿಕೆಗಳ ವಿರುದ್ಧ ವಿಚಾರ ಮಂಡಿಸಿ ಸಭೆಯ ಗಮನ ಸೆಳೆದರು. ಶರೀಫ್ ಬೆಳೆಯಲಿ, ಸಮಾಜದ ಹಿರಿಯರಾದ ಮಾರ್ಥಂಡಪ್ಪ ಹಾದಿಮನಿ ಸಮಾಜದ ಮೇಲಾಗುತ್ತಿರುವ ಅನ್ಯಾಯದ ವಿರುದ್ಧ ಕಿಡಿಕಾರಿದರು.

ಸಭೆಯಲ್ಲಿ ಸಂಘಟನೆ ಅಧ್ಯಕ್ಷರಾದ ಪ್ರವೀಣ್ ಹಾದಿಮನಿ, ವಿರೂಪಾಕ್ಷಪ್ಪ ರಾಮಗಿರಿ, ಸಲ್ಮಾನ್ ಬನ್ನೂರ್, ಸಂಘಟನೆಯ ಪದಾಧಿಕಾರಿಗಳು ಉಪಸ್ಥಿತರಿದ್ದರು. ಮಣಿಕಂಠ ಹಾದಿಮನಿ ನಿರೂಪಿಸಿದರು, ಫಕ್ಕೀರೇಶ ರಾಮಗಿರಿ ವಂದಿಸಿದರು.

# ರಸ್ತೆ ಸುಧಾರಣಾ ಕಾಮಗಾರಿ ಪುನರಾರಂಭ



■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಕಳೆದ ಕೆಲವು ವರ್ಷಗಳಿಂದ ಸ್ಥಗಿತಗೊಂಡಿದ್ದ ಸಮೀಪದ ಜಂದಿಶಾವಲಿ ದರ್ಗಾಕ್ಕೆ ತೆರಳುವ ರಸ್ತೆ ಸುಧಾರಣಾ ಕಾಮಗಾರಿಯನ್ನು ಪುನಃ ಆರಂಭಿಸಲಾಯಿತು.

ಕಳೆದ ವರ್ಷ ಲಕ್ಕುಂಡಿ ಕದಾಂಪೂರ ರಸ್ತೆಯಿಂದ ದರ್ಗಾದವರೆಗೂ ಡಾಂಬರೀಕರಣ ಕಾಮಗಾರಿ ಮುಕ್ತಾಯವಾಗಿತ್ತು. ಆದರೆ ಗದಗ ರಸ್ತೆಯಲ್ಲಿ ಮಹಾದ್ವಾರದಿಂದ ದರ್ಗಾದವರೆಗೂ ಕೆಲವು ತಕರಾರುಗಳಿಂದ ಸ್ಥಗಿತಗೊಂಡಿತ್ತು. ಈಗ ಮುಸ್ಲಿಂ ಜಮಾತ್(ಆಡಳಿತ) ಅಂಜುಮನ್ ಏ ಇಸ್ಲಾಮ್ ಕಮಿಟಿ ಹಾಗೂ ಗ್ರಾಮದ ಗುರು–ಹಿರಿಯರ ಮಧ್ಯಸ್ಥಿಕೆಯಿಂದ ರಸ್ತೆಯ ಅಕ್ಕ ಪಕ್ಕದ ಜಮೀನಿನ ರೈತರು ಸಹಕಾರ ನೀಡಿದ್ದರಿಂದ ರಸ್ತೆ ಡಾಂಬರೀಕರಣ ಕಾಮಗಾರಿ ಆರಂಭವಾಯಿತು. ಇದರಿಂದ ರಾಜ್ಯ ವಿವಿಧ ಕಡೆಯಿಂದ ಆಗಮಿಸುವ ಭಕ್ತರಿಗೆ ಅನುಕೂಲವಾಗಲಿದೆ ಎಂದು ಇಸ್ಲಾಮ್ ಕಮಿಟಿ ಸಂತಸ ವ್ಯಕ್ತಪಡಿಸಿದೆ.



ಗದಗ ನಗರದ ವಿಜಯ ಪದವಿಪೂರ್ವ ಕಾಲೇಜಿನಲ್ಲಿ 2024–25ನೇ ಸಾಲಿನ ಚಿಕ್ಕಮಗಳೂರಿನ ಶೈಕ್ಷಣಿಕ ಪ್ರವಾಸವನ್ನು ಕೈಗೊಂಡಿದ್ದರು. ಚಿಕ್ಕಮಗಳೂರಿನ ಸುಪ್ರಸಿದ್ಧ ಪ್ರಾಕೃತಿಕ ಸೌಂದರ್ಯದ ಸ್ಥಳಗಳಾದ ಮುಳ್ಳಯ್ಯನಗಿರಿಯ ಶೂಟಿಂಗ್ ಪಾಯಿಂಟ್, ಬಾಬಾ ಬುಡನ್‌ಗಿರಿ ಜಡ್ ಪಾಯಿಂಟ್, ಉಕ್ಕಡ ಫಾಲ್ಸ್, ಝರಿ ಫಾಲ್ಸ್ ಸೇರಿದಂತೆ ಇನ್ನೂ ಅನೇಕ ಸ್ಥಳಗಳಿಗೆ ಭೇಟಿ ನೀಡಿದರು.

### ವಿದ್ಯುತ್ ಅವಘಡದಿಂದ ಕಬ್ಬಿಗೆ ಬೆಂಕಿ । 2 ಎಕರೆ ಕಬ್ಬು ನಾಶ

# ಸೂಕ್ತ ಪರಿಹಾರಕ್ಕೆ ಮನವಿ

■ ವಿಜಯಸಾಕ್ಷಿ ಸುದ್ದಿ, ಡಂಬಳ

ವಿದ್ಯುತ್ ಶಾರ್ಟ್ ಸರ್ಕ್ಯೂಟ್‌ನಿಂದ ಬೆಂಕಿ ತಗುಲಿ ಕಬ್ಬು ಬೆಳೆ ಆಹುತಿಯಾದ ಘಟನೆ ಡಂಬಳ ಗ್ರಾಮದಲ್ಲಿ ಶನಿವಾರ ಸಂಭವಿಸಿದೆ.

ಗ್ರಾಮದ ಪ್ರಕಾಶ ರೇವಣಸಿದ್ಧಪ್ಪ ಪಲ್ಲೇದ ಅವರಿಗೆ ಸೇರಿದ ಕಬ್ಬಿನ ಗದ್ದೆಗೆ ಬೆಂಕಿ ಬಿದ್ದಿದೆ. ಅಂದಾಜು 3 ಎಕರೆ ಕಬ್ಬಿನ ಬೆಳೆಯಲ್ಲಿ 2 ಎಕರೆಯಷ್ಟು ಬೆಂಕಿಗಾಹುತಿಯಾಗಿದೆ. ಅಗ್ನಿ ಶಾಮಕ ದಳದ ಸಿಬ್ಬಂದಿ ಸ್ಥಳಕ್ಕೆ ದೌಡಾಯಿಸಿ ಬೆಂಕಿ ನಂದಿಸಲು ಹರಸಾಹಸ ಪಟ್ಟು ಬೆಂಕಿ ನಂದಿಸಿದರು.

ಬೀಜ, ಗೊಬ್ಬರ, ಕೂಲಿ ಸೇರಿ ಅಂದಾಜು 1 ಲಕ್ಷ ರೂ.ಗಿಂತ ಹೆಚ್ಚು ಖರ್ಚು ಮಾಡಿ ಕಬ್ಬು ಬೆಳೆಯಲಾಗಿತ್ತು. ಕಟಾವಿಗೆ ಬಂದ ಬೆಳೆ ಬೆಂಕಿಗಾಹುತಿಯಾಗಿರುವುದು ರೈತನನ್ನು ಚಿಂತೆಗೀಡು ಮಾಡಿದೆ.



ಕಬ್ಬಿನ ಬೆಳೆಯ ಪಕ್ಕವೇ ಟಿ.ಸಿ ಮತ್ತು ವಿದ್ಯುತ್ ಲೈನ್ ಹಾದು ಹೋಗಿದೆ. ವಿದ್ಯುತ್ ತಂತಿಯ ಲೈನ್ ಎತ್ತರಿಸುವಂತೆ ಹಲವು ಬಾರಿ ಅಧಿಕಾರಿಗಳ ಗಮನಕ್ಕೆ ತರಲಾಗಿತ್ತು. ಆದರೆ, ಯಾರೊಬ್ಬರೂ ಸ್ಪಂದಿಸಲಿಲ್ಲ. ಈಗ ಕೈ ಸೇರಬೇಕಿದ್ದ ಕಬ್ಬು ವಿದ್ಯುತ್ ಅವಘಡದಿಂದ ನಾಶವಾಗಿದ್ದು, ಸೂಕ್ತ ಪರಿಹಾರವನ್ನು ಕೊಡಬೇಕೆಂದು ರೈತ ಪ್ರಕಾಶ ಪಲ್ಲೇದ ಮನವಿ ಮಾಡಿದರು.

ಅಗ್ನಿಶಾಮಕ ಠಾಣಾಧಿಕಾರಿ ರವಿಕುಮಾರ ಚವಡಿ, ಸಿಬ್ಬಂದಿಗಳಾದ ಎನ್.ವಿ. ಸೀಮಿಕೇರಿ, ಶಿನಗೌಡ ಕೆಂಚನಗೌಡ, ಪಿ.ಡಿ. ಕಬ್ಬರಗಿ, ಶಿವಕುಮಾರ ಕಿಳ್ಳಿಕೇತು, ಸುಮಂತಕುಮಾರ, ಪುನೀತ ಸೇರಿದಂತೆ ರೈತರು, ಗ್ರಾಮದ ಯುವಕರು ಇದ್ದರು.

> ಸರ್ಕಾರ ಬೆಂಬಲ ಬೆಲೆ ಯೋಜನೆಯಡಿ ಈರುಳ್ಳಿಯನ್ನು ಖರೀದಿಸಬೇಕು ಹಾಗೂ ಪ್ರಧಾನ ಮಂತ್ರಿ ಫಸಲ್ ಭೀಮಾ ಯೋಜನೆಯಡಿಯಲ್ಲಿ ಇನ್ಸೂರೆನ್ಸ್ ಕಂಪನಿ ಈರುಳ್ಳಿ ಬೆಳೆಗೆ ವಿಮೆ ತುಂಬಿಸಿಕೊಂಡಿದ್ದು ಬೇಗನೆ ಬೆಳೆ ಸಮೀಕ್ಷೆ ನಡೆಸಿ ಬೆಳೆ ವಿಮೆ ಪರಿಹಾರ ಬಿಡುಗಡೆ ಮಾಡಬೇಕು. ಬೇಡಿಕೆ ಈಡೇರದಿದ್ದರೆ ಮುಂದಿನ ದಿನಗಳಲ್ಲಿ ಜಿಲ್ಲಾದ್ಯಂತ ಹೋರಾಟ ಮಾಡಲಾಗುವುದು.
>
> **–ಯಲ್ಲಪ್ಪ ಎಚ್ ಬಾಬರಿ,**
> ಜಿಲ್ಲಾಧ್ಯಕ್ಷರು, ಹಸಿರು ಸೇನೆ,
> ನಾರಾಯಣರೆಡ್ಡಿ ಬಣ

# ಕಾಶ್ಮೀರಿ ಶಾಲು ಮಾರಾಟಗಾರರಿಗೆ ಬೆದರಿಕೆ: ಸಿಎಂ ಮಧ್ಯಪ್ರವೇಶಕ್ಕೆ ಮುಫ್ತಿ ಕರೆ

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ಜಮ್ಮು ಮತ್ತು ಕಾಶ್ಮೀರದ ಸುಮಾರು ಎರಡು ಡಜನ್ ನಷ್ಟು ಬಡ ಶಾಲು ಮಾರಾಟಗಾರರಿಗೆ ಹಿಮಾಚಲ ಪ್ರದೇಶದ ಬಿಲಾಸ್‌ಪುರದಲ್ಲಿ ಸ್ಥಳೀಯ ಹಿಂದುತ್ವ ಗುಂಪುಗಳು ವ್ಯಾಪಾರ ಮಾಡದಂತೆ ಮತ್ತು ಈ ಪ್ರದೇಶವನ್ನು ಬಿಟ್ಟು ಕಾಶ್ಮೀರಕ್ಕೆ ಹಿಂತಿರುಗುವಂತೆ ಕಿರುಕುಳ ನೀಡುತ್ತಿರುವ ಘಟನೆ ವರದಿಯಾಗಿದೆ.

ಈ ಅಸಹಾಯಕ ಶಾಲು ಮಾರಾಟಗಾರರು ಸಂಭಾವ್ಯ ಗ್ರಾಹಕರನ್ನು ತಲುಪಲು ಹೋದರೆ ತಮ್ಮ ಸರಕುಗಳನ್ನು ಸ್ಥಳೀಯ ಹಿಂದುತ್ವ ಗುಂಪುಗಳಿಂದ ವಶಪಡಿಸಿಕೊಳ್ಳಲಾಗುತ್ತದೆ ಎಂಬ ಭಯದಿಂದ ಒಂದೇ ಸ್ಥಳದಲ್ಲಿ ಕುಳಿತಿದ್ದಾರೆ.

ಜಮ್ಮು ಮತ್ತು ಕಾಶ್ಮೀರದ ಮಾಜಿ ಮುಖ್ಯಮಂತ್ರಿ ಮೆಹಬೂಬಾ ಮುಫ್ತಿ ಅವರು ಹಿಮಾಚಲ ಪ್ರದೇಶ ಮುಖ್ಯಮಂತ್ರಿ ಸುಖ್ವಿಂದರ್ ಸಿಂಗ್ ಅವರು ಈ ವಿಷಯದಲ್ಲಿ ಮಧ್ಯಪ್ರವೇಶಿಸುವಂತೆ ಮತ್ತು ಕಾಶ್ಮೀರದ ಶಾಲು ಮಾರಾಟಗಾರರ ರಕ್ಷಣೆಯನ್ನು ಖಚಿತಪಡಿಸಿಕೊಳ್ಳುವಂತೆ ಕೇಳಿಕೊಂಡಿದ್ದಾರೆ.

ಬಿಲಾಸ್‌ಪುರದಲ್ಲಿ ಸ್ಥಳೀಯ ಹಿಂದುತ್ವ ಗುಂಪುಗಳಿಂದ ಕಾಶ್ಮೀರಿ ಮಾರಾಟಗಾರರು ಎದುರಿಸುತ್ತಿರುವ ದೌರ್ಜನ್ಯದ ಬಗ್ಗೆ ಸುಖ್ವಿಂದರ್ ಸಿಂಗ್ ಮತ್ತು ಜಮ್ಮು ಮತ್ತು ಕಾಶ್ಮೀರ ಮುಖ್ಯಮಂತ್ರಿ ಒಮರ್ ಅಬ್ದುಲ್ಲಾ ಅವರ ಗಮನವನ್ನು ಸೆಳೆಯಲು ಮುಫ್ತಿ ಅವರು ಸಾಮಾಜಿಕ ಮಾಧ್ಯಮದಲ್ಲಿ ಮನವಿ ಮಾಡಿದ್ದಾರೆ. ಈ ವ್ಯಾಪಾರಿಗಳಿಗೆ ಸುರಕ್ಷಿತ ವಾತಾವರಣವನ್ನು ಖಚಿತಪಡಿಸುವಂತೆ ಸುಖ್ವಿಂದರ್ ಸಿಂಗ್ ಅವರನ್ನು ಕೇಳಿದ್ದಾರೆ.

ಹಿಮಾಚಲ ಪ್ರದೇಶದ ಬಿಲಾಸ್‌ಪುರ ಜಿಲ್ಲೆಯಲ್ಲಿ ಕಾಶ್ಮೀರಿ ಶಾಲು ಮಾರಾಟಗಾರರು ಹಿಂದುತ್ವ ಗುಂಪುಗಳಿಂದ ಕಿರುಕುಳ, ಹಲ್ಲೆ ಮತ್ತು ಬೆದರಿಕೆಗಳನ್ನು ಎದುರಿಸುತ್ತಿದ್ದಾರೆ. ಈ ವ್ಯಾಪಾರಿಗಳು ಸರಿಯಾದ ದಾಖಲೆಗಳನ್ನು ಹೊಂದಿರುವ ಹೊರತಾಗಿಯೂ, ಅವರನ್ನು ವ್ಯಾಪಾರ ಮಾಡದಂತೆ ನಿರ್ಬಂಧಿಸಲಾಗಿದೆ ಮತ್ತು ಹೊರಹಾಕಲಾಗುತ್ತಿದೆ. ಇದು ಈ ರಾಜ್ಯದಲ್ಲಿ ನಡೆದ ಮೂರನೇ ಘಟನೆಯಾಗಿದ್ದು, ಉದ್ದೇಶಪೂರ್ವಕ ಕಿರುಕುಳವು ಆತಂಕಕಾರಿಯಾಗಿದೆ ಎಂದು ಮುಫ್ತಿ ಹೇಳಿದ್ದಾರೆ.

ಸಾಮಾಜಿಕ ಮಾಧ್ಯಮದಲ್ಲಿ ವೈರಲ್ ಆಗಿರುವ ವೀಡಿಯೊದಲ್ಲಿ ಕಾಶ್ಮೀರಿ ಮಾರಾಟಗಾರರೊಬ್ಬರು, ನಾವು 3–4 ದಿನಗಳ ಕಾಲ ಇಲ್ಲಿ ಒಂದೇ ಕಡೆ ಕುಳಿತಿದ್ದೇವೆ. ನಮಗೆ ಕಿರುಕುಳ ನೀಡಲಾಗುತ್ತಿದೆ. ನಾವು ನಮ್ಮ ಸರಕುಗಳನ್ನು ಮಾರಾಟ ಮಾಡಲು ಬಸ್ ನಿಲ್ದಾಣಕ್ಕೆ ಹೋದಾಗ, ಅವಗಳನ್ನು ವಶಪಡಿಸಿಕೊಳ್ಳಲಾಗುತ್ತಿದೆ. ನಮಗೆ ವ್ಯಾಪಾರ ಮಾಡಲು ಬಿಡುತ್ತಿಲ್ಲ. ನಾವು ಆ ಪ್ರದೇಶದಿಂದ ದೂರ ಹೋಗಲು ಮತ್ತು ಕಾಶ್ಮೀರಕ್ಕೆ ಹಿಂತಿರುಗುವಂತೆ ಒತ್ತಾಯಿಸಲಾಗುತ್ತಿದೆ ಎಂದು ಅಳಲು ತೋಡಿಕೊಂಡಿದ್ದಾನೆ.

ಅಣ್ಣಿಗೇರಿ ಶರಣ ಸಾಹಿತ್ಯ ಪರಿಷತ್ತು

# ಆಡಂಬರವಿಲ್ಲದ ಅರ್ಥಪೂರ್ಣ ಸಮ್ಮೇಳನಕ್ಕೆ ನಿರ್ಧಾರ



■ ವಿಜಯಸಾಕ್ಷಿ ಸುದ್ದಿ, ಅಣ್ಣಿಗೇರಿ

ತಾಲೂಕಿನ ಅಡ್ನೂರು ಗ್ರಾಮದಲ್ಲಿ ಜರಗಲಿರುವ ಅಣ್ಣಿಗೇರಿ ತಾಲೂಕು ಮಟ್ಟದ ಶರಣ ಸಾಹಿತ್ಯ ಸಮ್ಮೇಳನವನ್ನು ಆಡಂಬರವಿಲ್ಲದೆ ಅರ್ಥಪೂರ್ಣವಾಗಿ ಆಚರಿಸಲು ತಾಲೂಕಾ ಶರಣ ಸಾಹಿತ್ಯ ಪರಿಷತ್ತು ನಿರ್ಧರಿಸಿತು.

ಅಣ್ಣಿಗೇರಿ ಪಟ್ಟಣದ ಬನವಾಸಿ ರಸ್ತೆಯ ಪಂಚಮುಖಿ ಆವರಣದ ಕಚೇರಿಯಲ್ಲಿ, ಹಿರಿಯರಾದ ಚಂದ್ರಶೇಖರ ಕೊಟ್ಟೂರ ಅವರ ಅಧ್ಯಕ್ಷತೆಯಲ್ಲಿ ಜರಗಿದ ಸಭೆಯಲ್ಲಿ ಈ ನಿರ್ಧಾರ ತೆಗೆದುಕೊಳ್ಳಲಾಯಿತು.

ಶರಣರ ಆಶಯಗಳ ಸತ್ಯ ಸಂದೇಶಗಳ ಗೋಷ್ಠಿ ಜೊತೆಗೆ ತಾಲೂಕಿನಲ್ಲಿ ಅದರಂತೆ ಬಾಳಿ ಬದುಕಿದವರಿಗೆ ಗೌರವ ಸನ್ಮಾನ, ಕೊಲ್ಹಾಪುರ ಕನೇರಿ ಮಠದ ಶ್ರೀಗಳಿಂದ ಒಕ್ಕಲುತನ ಗೋಷ್ಠಿ, ಶರಣ ಸಾಹಿತ್ಯ ಪರಿಷತ್ತು ಸಂಸ್ಥಾಪಕರಾದ ಸುತ್ತೂರು ಶ್ರೀಗಳನ್ನು ಸಮ್ಮೇಳನಕ್ಕೆ ಆಮಂತ್ರಿಸಲು ನಿರ್ಣಯಿಸಲಾಯಿತು.

ಪರಿಷತ್ತಿನ ತಾಲೂಕು ಘಟಕದ ಅಧ್ಯಕ್ಷ ಎನ್. ಎಂ. ಯಲಬುರ್ಗಿ ಸಮ್ಮೇಳನ ಯಶಸ್ವಿಯಾಗಿ ಜರಗಲು ಎಲ್ಲರ ಸಹಕಾರ ಕೋರಿದರು. ಚರ್ಚೆಯಲ್ಲಿ ವೀರೇಶ ಶಾನುಭೋಗರ, ಚಂದ್ರಶೇಖರ ಸುರಕೋಡ, ಪಿ.ಕೆ. ಕೊಕಾಟೆ, ಲಿಂಗನಗೌಡ ಪಾಟೀಲ, ಡಿ. ಬಿ. ನರಗುಂದ, ರಿಷಿಕುಮಾರ ಸಾರಂಗಿ, ಪಾಂಡುರಂಗ ಬಿರಸಲ, ಗುರುನಾಥ ಜೋಗಿ, ಮಲ್ಲಿಕಾರ್ಜುನ ಹೊಸಮನಿ, ಬಸನಗೌಡ ಹುಡೇದ, ಅರುಣಕುಮಾರ ಹೂಗಾರ ಮತ್ತಿತರರು ಪಾಲ್ಗೊಂಡಿದ್ದರು.

# ಸಿಖ್ ಸಂಪ್ರದಾಯದಂತೆ ನೆರವೇರಿದ ಡಾ. ಮನಮೋಹನ್ ಸಿಂಗ್ ಅಂತ್ಯಕ್ರಿಯೆ!

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ಗುರುವಾರ ಸಂಜೆ ನಿಧನರಾದ ಮಾಜಿ ಪ್ರಧಾನಿ ಡಾ. ಮನಮೋಹನ್ ಸಿಂಗ್ ಅವರ ಅಂತ್ಯಕ್ರಿಯೆ ಶನಿವಾರ ದೆಹಲಿಯ ನಿಗಮಬೋಧ್ ಘಾಟ್‌ನಲ್ಲಿ ಸಿಖ್ ಸಂಪ್ರದಾಯದಂತೆ, ಸಕಲ ಸರ್ಕಾರಿ ಗೌರವಗಳೊಂದಿಗೆ ನೆರವೇರಿತು.

ಸಿಂಗ್ ಅವರ ಪಾರ್ಥಿವ ಶರೀರಕ್ಕೆ ಹೊದಿಸಲಾಗಿದ್ದ ರಾಷ್ಟ್ರಧ್ವಜವನ್ನು ಮನಮೋಹನ್ ಸಿಂಗ್ ಅವರ ಕುಟುಂಬಸ್ಥರಿಗೆ ಹಸ್ತಾಂತರ ಮಾಡಲಾಯಿತು. ಬಳಿಕ ಸಿಖ್ ಧರ್ಮದ ಧಾರ್ಮಿಕ ಕ್ರಮದಂತೆ ಶ್ಲೋಕಗಳನ್ನು ಪಠಣ ಮಾಡಿ, ಮಧ್ಯಾಹ್ನ ಮನಮೋಹನ್ ಸಿಂಗ್ ಅವರ ಪಾರ್ಥೀವ ಶರೀರಕ್ಕೆ ಅಗ್ನಿ ಸ್ಪರ್ಶ ಮಾಡಲಾಯಿತು.

ಅಂತ್ಯಕ್ರಿಯೆಯಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಜಗದೀಪ್ ಧನಕರ್, ಪ್ರಧಾನಿ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ, ರಕ್ಷಣಾ ಸಚಿವ ರಾಜನಾಥ್ ಸಿಂಗ್, ಸ್ಪೀಕರ್ ಓಂ ಬಿರ್ಲಾ, ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ, ಸೋನಿಯಾ ಗಾಂಧಿ, ಮಲ್ಲಿಕಾರ್ಜುನ್ ಖರ್ಗೆ, ಸಿಎಂ ಸಿದ್ದರಾಮಯ್ಯ, ಡಿ.ಕೆ. ಶಿವಕುಮಾರ್ ಸೇರಿದಂತೆ ಪ್ರಮುಖ ಗಣ್ಯರು, ಕೈ ನಾಯಕರು, ವಿದೇಶಿ ರಾಜತಾಂತ್ರಿಕರು ಪಾಲ್ಗೊಂಡಿದ್ದರು

ಮೂರು ಸೇನಾಪಡೆಯಿಂದ ಗೌರವ ಸಮರ್ಪಣೆ ಮಾಡಲಾಯಿತು. ಕುಸಿಯುತ್ತಿದ್ದ ಭಾರತದ ಆರ್ಥಿಕತೆಯನ್ನು ಸರಿದಾರಿಗೆ ತಂದ ನವಭಾರತದ ಆರ್ಥಿಕತೆಯ ನಿರ್ಮಾತೃ, ದೇಶ ಕಂಡ ಶ್ರೇಷ್ಠ ಪ್ರಧಾನಿಯನ್ನು ದೇಶವು ತುಂಬಿದ ಕಣ್ಣುಗಳಿಂದ ಬೀಳ್ಕೊಟ್ಟಿತು.

# ಜಯಪ್ರಕಾಶಗೌಡ ಹೇಳಿಕೆಗೆ ಜಿಲ್ಲಾ ಕಸಾಪ ಖಂಡನೆ

■ ವಿಜಯಸಾಕ್ಷಿ ಸುದ್ದಿ, ಗದಗ



ಹಾವೇರಿ ಹಾಗೂ ಮಂಡ್ಯದಲ್ಲಿ ಅಖಿಲ ಭಾರತ ಸಾಹಿತ್ಯ ಸಮ್ಮೇಳನಗಳು ಅತ್ಯಂತ ಯಶಸ್ವಿಯಾಗಿ ಜರುಗಿ ಜನಮಾನಸದಲ್ಲಿ ಕನ್ನಡದ ಪ್ರಜ್ಞೆಯನ್ನು ಜಾಗೃತಗೊಳಿಸಿವೆ. ಆದರೆ, ಇದಕ್ಕೆ ವ್ಯತಿರಿಕ್ತವಾಗಿ ಮಂಡ್ಯ ಜಿಲ್ಲಾ ಮಾಜಿ ಕಸಾಪ ಅಧ್ಯಕ್ಷ ಜಯಪ್ರಕಾಶಗೌಡ ನೀಡಿರುವ ಹೇಳಿಕೆಯನ್ನು ಗದಗ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಖಂಡಿಸಿದೆ.

ಹಾವೇರಿ ಮತ್ತು ಮಂಡ್ಯ ಸಮ್ಮೇಳನಗಳು ಅಭೂತಪೂರ್ವ ಯಶಸ್ಸು ಗಳಿಸಿರುವದನ್ನು ನಾಡೇ ಸಂಭ್ರಮಿಸಿದೆ. ಸಮ್ಮೇಳನ ಕನ್ನಡಿಗರ ಹಬ್ಬವಾಗಿದ್ದು ಚರ್ಚೆ, ಸಂವಾದ, ಸಾಂಸ್ಕೃತಿಕ ಕಾರ್ಯಕ್ರಮಗಳ ಮೂಲಕ ಕನ್ನಡಿಗರಲ್ಲಿ ಭಾಷಾಭಿಮಾನ ಸದಾ ಜಾಗೃತವಾಗಿಡುವ ಕಾರ್ಯವನ್ನು ಪರಿಷತ್ತು ಮಾಡುತ್ತಾ ಬಂದಿದೆ. ಆದರೆ ಜಯಪ್ರಕಾಶಗೌಡ ಅವರು ಯಶಸ್ಸನ್ನು ಅರಗಿಸಿಕೊಳ್ಳದೇ ಮೊಸರಲ್ಲಿ ಕಲ್ಲು ಹುಡುಕುವ ಪ್ರಯತ್ನವನ್ನು ಮಾಡುತ್ತಿದ್ದಾರೆ. ಪೂರ್ವಾಗ್ರಹ ಪೀಡಿತರಾಗಿ ಈ ರೀತಿಯ ಹೇಳಿಕೆ ನೀಡುವದು ಕನ್ನಡಿಗರಿಗೆ ಮಾಡುವ ಅವಮಾನವಾಗಿದೆ.

ಅವರು ತಮ್ಮ ಹೇಳಿಕೆಯನ್ನು ಹಿಂಪಡೆದುಕೊಂಡು ಮಂಡ್ಯ ಹಾಗೂ ಹಾವೇರಿ ಜಿಲ್ಲೆಯ ಜನತೆಯ ಕ್ಷಮೆ ಕೇಳಬೇಕೆಂದು ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ, ಕಾರ್ಯದರ್ಶಿ ಶಿವಾನಂದ ಗಿಡ್ನಂದಿ, ಕಿಶೋರಬಾಬು ನಾಗರಕಟ್ಟಿ, ಕೋಶಾಧ್ಯಕ್ಷ ಡಿ.ಎಸ್. ಬಾಪುರಿ, ಡಾ. ದತ್ತಪ್ರಸನ್ನ ಪಾಟೀಲ, ಶ್ರೀಕಾಂತ ಬಡ್ಡೂರ ಪ್ರಕಟನೆಯಲ್ಲಿ ಒತ್ತಾಯಿಸಿದ್ದಾರೆ.

ಜನ ಜಾಗೃತಿ ಧರ್ಮ ಸಮಾರಂಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು

# ನಾಗರಿಕತೆಯ ನೆಪದಲ್ಲಿ ಸಂಸ್ಕೃತಿ ನಾಶಗೊಳ್ಳದಿರಲಿ

■ ವಿಜಯಸಾಕ್ಷಿ ಸುದ್ದಿ, ತುಮಕೂರು

ಮಾನವ ಜೀವನದಲ್ಲಿ ಧೈರ್ಯ ಮತ್ತು ಚಲನಶೀಲತೆ ಮುಖ್ಯ. ಭೌತಿಕ ಬದುಕಿಗೆ ಸಂಪತ್ತಷ್ಟೇ ಮುಖ್ಯವಲ್ಲ. ಸಂಸ್ಕೃತಿ ಮುಖ್ಯ. ಆಧುನಿಕತೆ ಮತ್ತು ವೈಚಾರಿಕತೆಯಲ್ಲಿ ಭಾರತೀಯ ಉತ್ಕೃಷ್ಟ ಸಂಸ್ಕೃತಿ ನಾಶಗೊಳ್ಳಬಾರದೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಶನಿವಾರ ಶ್ರೀ ವಿಶಾಲಾಕ್ಷಮ್ಮ ಸದಾಶಿವಯ್ಯ ಸಭಾಭವನದಲ್ಲಿ ಶ್ರೀ ಜಗದ್ಗುರು ಪಂಚಾಚಾರ್ಯ ಸೇವಾ ಟ್ರಸ್ಟಿನ ಆಶ್ರಯದಲ್ಲಿ ಜನ ಜಾಗೃತಿ ಧರ್ಮ ಸಮಾರಂಭದ 3ನೇ ದಿನದ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಜಗತ್ತು ಮತ್ತು ಜನ ಎಷ್ಟೇ ಬದಲಾದರೂ ಮಾನವ ಸಂಬಂಧಗಳು ಸಡಿಲಗೊಳ್ಳಬಾರದು. ಬಾಂಧವ್ಯ ಸಂಬಂಧಗಳನ್ನು ಮರೆತರೆ ಮನುಷ್ಯನಿಗೂ ಯಂತ್ರಕ್ಕೂ ಯಾವುದೇ ವ್ಯತ್ಯಾಸ ಇರುವುದಿಲ್ಲ. ವ್ಯಕ್ತಿಗೆ ಕೊಳೆ ಅಂಟಿದರೆ ಶುದ್ಧ ಮಾಡಬಹುದು. ಆದರೆ ವ್ಯಕ್ತಿತ್ವ ಕೊಳಕಾಗಿದ್ದರೆ ತೊಳೆಯುವುದು ಕಷ್ಟ. ಮಾನವನ ಉಸಿರಾಟಕ್ಕೆ ಗಾಳಿ ಎಷ್ಟು ಮುಖ್ಯವೋ ಅಷ್ಟೇ ಜೀವನ ಉಜ್ವಲ ಭವಿಷ್ಯಕ್ಕೆ ಧರ್ಮಾಚಾರ್ಯರ ಮಾರ್ಗದರ್ಶನ ಮುಖ್ಯವಾಗಿದೆ. ಭೌತಿಕ ಬದುಕು ಸಮೃದ್ಧಗೊಂಡಂತೆ ಆಂತರಿಕ ಬದುಕು ಪರಿಶುದ್ಧಗೊಳ್ಳಬೇಕಾದುದು ಅವಶ್ಯಕ. ಯುವಶಕ್ತಿ ದೇಶದ ಬಲು ದೊಡ್ಡ ಶಕ್ತಿ ಮತ್ತು ಆಸ್ತಿ. ಯುವ ಜನಾಂಗ ತಾತ್ವಿಕ ಚಿಂತನೆಗಳ ಮೂಲಕ ಸುಖ-ಶಾಂತಿ ಪಡೆಯಬೇಕೆಂದು ಶ್ರೀ ಜಗದ್ಗುರು ರೇಣುಕಾಚಾರ್ಯರು ಬೋಧಿಸಿದ್ದಾರೆ ಎಂದರು.



ಬಳ್ಳಾರಿ ಡಾ. ಚಿಕ್ಕ್ಯಾಟಿ ಮಠದ ವೀರಭದ್ರಯ್ಯನವರು ವೀರಶೈವ ಧರ್ಮದ ಪ್ರಾಚೀನತ್ವ ಕುರಿತು ಉಪನ್ಯಾಸ ನೀಡಿದರು. ಶಿವಗಂಗೆ ಹೊನ್ನಮ್ಮ ಗವಿಮಠದ ರುದ್ರಮುನಿ ಶಿವಾಚಾರ್ಯ ಸ್ವಾಮಿಗಳು ಉಪದೇಶಾಮೃತವನ್ನಿತ್ತರು. ಸಿದ್ಧರಬೆಟ್ಟದ ವೀರಭದ್ರ ಶಿವಾಚಾರ್ಯರು ನೇತೃತ್ವ ವಹಿಸಿದ್ದರು. ಹೆಚ್.ಎಸ್. ರವಿಶಂಕರ, ಎನ್.ನಂಜುಂಡೇಶ, ಎಸ್.ಜಿ. ಚಂದ್ರಮೌಳಿ, ಸಿದ್ಧಗಂಗಾ ರುದ್ರೇಶ್ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದರು.

ಕೆ.ಮಲ್ಲಿಕಾರ್ಜುನಯ್ಯ, ಎನ್.ಬಿ. ಪ್ರದೀಪಕುಮಾರ, ಅತ್ತಿ ರೇಣುಕಾನಂದ, ಎ.ಆರ್. ದಶರಥ, ಎಸ್.ಎಸ್. ಆರಾಧ್ಯರು, ಡಾ.ರಾಜೇಂದ್ರ ಮೂಗಿ ಮೊದಲಾದ ಗಣ್ಯರಿಗೆ ಶ್ರೀ ರಂಭಾಪುರಿ ಜಗದ್ಗುರುಗಳು ಗುರುರಕ್ಷೆಯಿತ್ತು ಶುಭ ಹಾರೈಸಿದರು. ತೆವಡೇಹಳ್ಳಿ ಗೋಸಲ ಚನ್ನಬಸವೇಶ್ವರ ಶಿವಾಚಾರ್ಯರು, ಅಂಬಲದೇವರಹಳ್ಳಿ ಮಠದ ಉಜ್ಜನೀಶ್ವರ ಶಿವಾಚಾರ್ಯರು ಸಮಾರಂಭದಲ್ಲಿ ಉಪಸ್ಥಿತರಿದ್ದರು. ಡಿ.ಆರ್. ಸತೀಶ ಸ್ವಾಗತಿಸಿದರು. ರೇಖಾ ಶಿವಕುಮಾರ್ ನಿರೂಪಣೆ ಮಾಡಿದರು.

ಕೇಂದ್ರದ ಜಲಶಕ್ತಿ ಹಾಗೂ ರೇಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಮಾತನಾಡಿ, ಅಶಾಂತಿಯಿಂದ ತತ್ತರಿಸುತ್ತಿರುವ ಜೀವ ಜಗತ್ತಿಗೆ ಆಧ್ಯಾತ್ಮದ ಚಿಂತನ ಮುಖ್ಯ. ಈ ನಾಡಿನ ಧರ್ಮ ಪೀಠಗಳು ಉತ್ಕೃಷ್ಟ ಸಂಸ್ಕೃತಿ ಬೆಳೆಸುವ ನಿಟ್ಟಿನಲ್ಲಿ ಬಹು ದೊಡ್ಡ ಕೊಡುಗೆ ಕೊಟ್ಟಿದ್ದಾರೆ. ಶ್ರೀ ಜಗದ್ಗುರು ರಂಭಾಪುರಿ ಪೀಠ ಮಾನವ ಧರ್ಮಕ್ಕೆ ಜಯವಾಗಲಿ ಧರ್ಮದಿಂದಲೇ ವಿಶ್ವಕ್ಕೆ ಶಾಂತಿಯೆಂದು ನಿರೂಪಿಸಿದೆ. ಇಂಥ ಅಮೂಲ್ಯ ಸಂದೇಶ ಸಾರಿದ ರಂಭಾಪುರಿ ಪೀಠದ ಘೋಷಣೆ ಸಮಾಜ ಮರೆಯುವಂತಿಲ್ಲ ಎಂದರು.

ಕಿರಿಯರ ಕ್ರಿಕೆಟ್ ಪಂದ್ಯಾವಳಿ

# ಜಾನೋಪಂತರ ಕ್ರಿಕೆಟ್ ಅಕಾಡೆಮಿಗೆ ಪ್ರಶಸ್ತಿ

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಜಾನೋಪಂತರ ಕ್ರಿಕೆಟ್ ಅಕಾಡೆಮಿಯ (16 ವರ್ಷದೊಳಗಿನ) ತಂಡವು ಹುಬ್ಬಳ್ಳಿಯ ಶ್ರೀ ಸಿದ್ಧಾರೂಢಸ್ವಾಮಿ ಸ್ಪೋರ್ಟ್ಸ್ ಕ್ಲಬ್‌ನ ಆಶ್ರಯದಲ್ಲಿ ಆಹ್ವಾನಿತ ತಂಡಗಳಿಗಾಗಿ ನಡೆದ ನಿಗದಿತ ಓವರ್‌ಗಳ ಕ್ರಿಕೆಟ್ ಟೂರ್ನಿಯನ್ನು ಗೆದ್ದುಕೊಂಡಿತು. ಅಂತಿಮ ಪಂದ್ಯದಲ್ಲಿ ಹುಬ್ಬಳ್ಳಿಯ ಕೆ.ಎಲ್.ಇ. ಹೈಸ್ಕೂಲ್ ತಂಡವನ್ನು 54 ರನ್‌ಗಳಿಂದ ಸೋಲಿಸಿ, ಪ್ರಶಸ್ತಿಯನ್ನು ತನ್ನದಾಗಿಸಿಕೊಂಡಿತು.

ಹುಬ್ಬಳ್ಳಿಯ ಬಿ.ಜಿ. ಮೈದಾನದಲ್ಲಿ ನಡೆದ ಟೂರ್ನಿಯಲ್ಲಿ ಹುಬ್ಬಳ್ಳಿ, ಧಾರವಾಡ, ಗದಗ, ಹಾವೇರಿ, ರಾಣೆಬೆನ್ನೂರ ಹಾಗೂ ಅಂಕಲಿಯ ಒಟ್ಟು 8 ತಂಡಗಳು ಭಾಗವಹಿಸಿದ್ದವು. ಅಂತಿಮ ಪಂದ್ಯದಲ್ಲಿ ಗದುಗಿನ ಜಾನೋಪಂತರ ಅಕಾಡೆಮಿಯು ಮೊದಲು ಬ್ಯಾಟಿಂಗ್ ಮಾಡಿ 6 ವಿಕೆಟ್ ನಷ್ಟಕ್ಕೆ 103 ರನ್ ಗಳಿಸಿತು. ಗದಗ ತಂಡದ ಪರ ತೇಜಸ್ ವಾಲ್ಮೀಕಿ, ಅಪ್ಪಾಜಿ, ಸುಮಿತ್ ಹೆರಾಡೆ ಮತ್ತು ಸಮೃದ್ಧ ಉತ್ತಮ ಬ್ಯಾಟಿಂಗ್ ಪ್ರದರ್ಶನ ನೀಡಿದರು.



ಹುಬ್ಬಳ್ಳಿ ತಂಡದ ಪ್ರೀತಮ್ ಸುಂಕಾಪೂರ 2 ವಿಕೆಟ್ ಪಡೆದರು. ಉತ್ತರವಾಗಿ 104 ರನ್‌ಗಳನ್ನು ಗಳಿಸಬೇಕಾಗಿದ್ದ ಹುಬ್ಬಳ್ಳಿ ತಂಡ-ಕ್ಕೆ ಗದಗ ತಂಡದ ತೇಜಸ್ಸ ವಾಲ್ಮೀಕಿಯ (4 ವಿಕೆಟ್) ಬೌಲಿಂಗ್ ದಾಳಿಯನ್ನು ಎದುರಿಸಲಾಗದೇ 49 ರನ್‌ಗಳನ್ನು ಗಳಿಸಿ ಸೋಲನ್ನು ಒಪ್ಪಿಕೊಂಡಿತು. ಹರ್ಷ ಶಾಂಕೆ ಹಾಗೂ ಸುಮಿತ್ ಹೆರಾಡೆ ತಲಾ 2 ವಿಕೆಟ್ ಪಡೆದರು, ನಿತಿನ್ ಬದಿ 1 ವಿಕೆಟ್ ಪಡೆದು ಗದಗ ತಂಡದ ಜಯದ ರೂವಾರಿಯಾದರು.

ಪ್ರಶಸ್ತಿ ಪಡೆದ ಗದಗ ಕಿರಿಯರ ತಂಡಕ್ಕೆ ಜಾನೋಪಂತರ ಕ್ರಿಕೆಟ್ ಅಕಾಡೆಮಿಯ ತರಬೇತುದಾರರಾದ ವೀರಣ್ಣ ಜಾನೋಪಂತರ, ಮಲ್ಲಿಕಾರ್ಜುನ ಭೂಪಾನಿ, ಮಹಾಂತೇಶ ಹಾನಗಲ್, ರಾಘವೇಂದ್ರ ಬಡಿಗೇರ, ಅಮಿತ್ ಬಾಚಲಾಪೂರ, ವಿಶಾಲ ಕಬಾಡಿ, ಅಭಿಲಾಷ ಪುರಾಣಿಕಮಠ, ರಾಘವೇಂದ್ರ ಡಿ.ಪ್ರಸಾದ ಮುಂತಾದವರು ಅಭಿನಂದನೆಗಳನ್ನು ತಿಳಿಸಿದ್ದಾರೆ.

ಪಂದ್ಯದ ನಂತರ ನಡೆದ ಪ್ರಶಸ್ತಿ ವಿತರಣಾ ಸಮಾರಂಭದಲ್ಲಿ ಗದಗ ತಂಡದ ತೇಜಸ್ ವಾಲ್ಮೀಕಿ ಟೂರ್ನಿಯ ಆಟಗಾರನಾಗಿ ಪ್ರಶಸ್ತಿಯನ್ನು ಪಡೆದುಕೊಂಡರು. ಹುಬ್ಬಳ್ಳಿ ತಂಡದ ರೂವಾನ್ ಶೇಖ (ಅತ್ಯುತ್ತಮ ಬ್ಯಾಟ್ಸ್‌ಮ್ಯಾನ್) ಹಾವೇರಿ ತಂಡದ ಪ್ರಣವ ಲಂಬಿ ಅತ್ಯುತ್ತಮ ಬೌಲರ್ ಪ್ರಶಸ್ತಿ ಪಡೆದರು. ಸಂಘಟಿಕರಾದ ಪ್ರಕಾಶ (ಬಾಲಾಜಿ) ಹಾಗೂ ಅರುಣ ಸಾದಣ್ಣವರ ಕಾರ್ಯಕ್ರಮ ನಡೆಸಿಕೊಟ್ಟರು.

ಶ್ರೀ ಗವಿಸಿದ್ಧೇಶ್ವರ ಜಾತ್ರಾ ಮಹೋತ್ಸವ-2025

# ಶೃಂಗಾರಗೊಂಡ ಶ್ರೀ ಗವಿಮಠ

■ ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಭಕ್ತರ ಏಳಿಗೆಗಾಗಿ ಸಾಮಾಜಮುಖಿ ಕಾರ್ಯಗಳಿಂದ ಹೆಸರುವಾಸಿಯಾದ ಶ್ರೀ ಗವಿಮಠ ಭಕ್ತರಲ್ಲಿ ಭಗವಂತನನ್ನು ಕಾಣುತ್ತಿದೆ ಎನ್ನುವುದಕ್ಕೆ ಮಹಾಜಾತ್ರೋತ್ಸವ ಹಾಗೂ ಮಹಾದಾಸೋಹ ಶೈಕ್ಷಣಿಕ ಕೊಡುಗೆಗಳೇ ಸಾಕ್ಷಿ. ಇನ್ನೊಂದು ಹೆಜ್ಜೆ ಎಂಬಂತೆ ಶ್ರೀಮಠಕ್ಕೆ ಆಗಮಿಸುವ ಪ್ರತಿಯೊಬ್ಬ ಭಕ್ತರು ಮಠದ ಸಂಪತ್ತು, ಭಾವಿಸಿರುವ ಸಂಸ್ಥಾನ ಶ್ರೀ ಗವಿಮಠವು ಆಗಮಿಸಿದ ಭಕ್ತರಿಗೆ ಭಕ್ತಿಯ ಜೊತೆ-ಗೆ ಅಕರ್ಷಣೆಯ ಅನಂದ ತುಂಬಲು ಶ್ರೀಮಠದ ಆವರಣವನ್ನು ಅಲಂಕರಿಸುತ್ತಿದೆ.

ಈಗಾಗಲೇ ಸುಂದರ ಮಹಾಮಂಟಪ ದ್ವಾರಬಾಗಿಲಿನ ಮುಂಭಾಗದ ಆವರಣ ಮಧ್ಯದಲ್ಲಿ ನಿರ್ಮಾಣಗೊಂಡಿದ್ದು, ಅದರ ಸುತ್ತಲೂ ಹಸಿರು ಹುಲ್ಲಿನ ಅಕರ್ಷಣೆ ಮಂಟಪವನ್ನು ಮತ್ತಷ್ಟು ಸುಂದರಗೊಳಿಸಿದೆ. ಶ್ರೀ ಗವಿಸಿದ್ಧೇಶ್ವರ ಸಂಗೀತ ವಿದ್ಯಾಪೀಠದ ಆವರಣ, ಶ್ರೀ ಗವಿಸಿದ್ಧೇಶ್ವರರ ಕರ್ತೃ ಗದ್ದುಗೆ ದರ್ಶನದ ಪ್ರವೇಶದ್ವಾರದ ಮುಂಭಾಗ, ನೂತನವಾಗಿ ನಿರ್ಮಾಣಗೊಂಡ ತೆಂಗಿನ ಕಾಯಿ ಒಡೆಯುವ ಮಂಟಪದ ಆವರಣ, ಕೆರೆಯ ಮುಂಭಾಗ, ದಾಸೋಹದ ಎದುರಿಗೆ ಇರುವ ಆವರಣ ಒಟ್ಟು ಒಂದುವರೆ ಲಕ್ಷ ಚದರ ಅಡಿಯ ವಿಶಾಲವಾದ ಅವರಣ ಹಸಿರಿನ ಹುಲ್ಲು ಹಾಸಿಗೆ ಸೊಬಗಿನಿಂದ ಕಂಗೊಳಿಸುತ್ತಿದೆ.



ಇವು ಎಲ್ಲವೂ ಶ್ರೀಮಠದ ಸೊಬಗು, ಸೌಂದರ್ಯ ದುಪ್ಪಟ್ಟು ಹೆಚ್ಚಿಸಿದೆ. ಎಲ್ಲ ಮಂಟಪಗಳು ಅಚ್ಚು ಮಲ್ಲಿಗೆಯ ಬಿಳುಪಿನ ಸುಂದರ ಕೆತ್ತನೆಗಳಾಗಿದ್ದು, ಒಟ್ಟು ಎರಡುವರೆ ಲಕ್ಷ ಚದರ ಅಡಿ ವಿಶಾಲವಾದ ನೆಲಹಾಸಿಗೆ ಶ್ರೀ ಮಠಕ್ಕೆ ಆಗಮಿಸಿದ ಭಕ್ತರ ಮನಸ್ಸು ಆಕರ್ಷಿಸುತ್ತಲಿದ್ದು, ಶ್ರೀ ಮಠಕ್ಕೆ ಆಗಮಿಸುವ ಭಕ್ತರಿಗೆ ಆನಂದದ ಜೊತೆಗೆ ಶ್ರೀಮಠದ ಆಕರ್ಷಣೆ ಹೆಚ್ಚಿಸಿವೆ.

ಕಳೆದ ವರ್ಷದಿಂದಲೇ ಪೂರಕ ಕಾರ್ಯಗಳು ಆರಂಭವಾಗಿದ್ದು, ಪ್ರಸ್ತುತ ವರ್ಷದ ಶ್ರೀ ಮಠದ ಆವರಣವು ಹಸಿರು ಹಾಸಿಗೆಯಿಂದ ಸಂಪೂರ್ಣ ಶೃಂಗಾರಗೊಂಡಿರುವುದು ವಿಶೇಷತೆಯಾಗಿದೆ. ಮುಖ್ಯ ರಸ್ತೆಯಿಂದ ಶ್ರೀ ಮಠದ ಆವರಣ ಪ್ರವೇಶಿಸುತ್ತಿದ್ದಂತೆ ಬಿಳಿ ಮತ್ತು ಕೆಂಪು ಕಲ್ಲಿನ ಸುಂದರವಾದ ಹಾಸಿಗೆ, ಎಡಕ್ಕೆ ಮತ್ತು ಬಲಕ್ಕೆ ಮಂಟಪಗಳು, ಎಡಬಾಗದ ಸಂಪೂರ್ಣ ಆವರಣದ ಸುಂದರವಾದ ತಡೆಗೋಡೆಗೆ ಹೊಂದಿಕೊಂಡಿರುವ ಶ್ರೀ ಮಠದ ಕಾರ್ಯಾಲಯ, ಅದರ ಶಿಲಾನ್ಯಾಸ ಕಲ್ಪನೆ ನೋಡುಗರ ಆಕರ್ಷಣೆಯ ಕೇಂದ್ರವಾಗಿದೆ.

ಶ್ರೀ ಮಠದ ಸೌಚಿದರ್ಯ ಹೆಚ್ಚಿಸುವ ಕಾರ್ಯಗಳು ಭರದಿಂದ ಸಾಗುತ್ತಿದ್ದು, ಸುಂದರ ಹೂ-ಗಿಡಗಳಿಂದ ಆವರಣ ಅಲಂಕೃತಗೊಂಡಿರುವದು ಈ ವರ್ಷದ ಜಾತ್ರೆಯ ಕಳೆಯನ್ನು ಇನ್ನಷ್ಟು ಹೆಚ್ಚಿಸಲಿವೆ.




VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka